ಸಂಪುಟ : ೯ ಸಂಚಿಕೆ 62 ಪುಟ : 4 ಬೆಲೆ: ೩.೦೦ ರವಿವಾರ ಎಪ್ರಿಲ್ 7 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 62 Pages : 4 Price : 3.00 Sunday April 7 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಲೋಕಸಭಾ ಸಾರ್ವತ್ರಿಕ ಚುನಾವಣೆಯ ಪ್ರಥಮ ಹಂತದ ಮತಗಟ್ಟೆ ಸಿಬ್ಬಂದಿಗಳ ತರಬೇತಿ ಸ್ಥಳವಾದ ಶ್ರೀ ಫಕೀರ ಚನ್ನವೀರೇಶ್ವರ ಆಂಗ್ಲ ಮಾಧ್ಯಮ ಶಾಲೆ ಹಾಗೂ ಎಫ್.ಎಂ. ಡಬಾಲಿ ಕಾಲೇಜನಲ್ಲಿರುವ ಇವಿಎಂ ಭದ್ರತಾ ಕೊಠಡಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಮತ್ತು ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು. ತಹಸೀಲ್ದಾರ ಅನಿಲ ಬಡಿಗೇರ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಬಹುವಾರ್ಷಿಕ ತೋಟಗಾರಿಕೆ ಬೆಳೆ ರಕ್ಷಣೆಗೆ ರೈತರ ಮೊರೆ । ಕೊಳವೆ ಬಾವಿಗಳಲ್ಲಿ ನೀರಿನ ಬರ

# ಟ್ಯಾಂಕರ್ ನೀರನ್ನಾದರೂ ಒದಗಿಸಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಬೇಸಿಗೆಯ ಬಿರು ಬಿಸಿಲಿನಿಂದ ತೋಟಗಾರಿಕೆ ಬೆಳೆ ಬೆಳೆದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆ ರಕ್ಷಣೆಗೆ ಟ್ಯಾಂಕರ್ ನೀರು ಒದಗಿಸಿ ಎಂದು ಅಂಗಲಾಚುತ್ತಿದ್ದಾರೆ.

ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ಸಹಿತ ಜಿಲ್ಲೆಯ ಎಲ್ಲ ತಾಲೂಕುಗಳು ಬರಪೀಡಿತ ಎಂದು ಘೋಷಣೆ ಮಾಡಲಾಗಿದೆ.

ಮಳೆ ಕೊರತೆಯಿಂದ ಅಂತರ್ಜಲ ಮಟ್ಟ ಕುಸಿತವಾಗಿ ಕೊಳವೆ ಬಾವಿಗಳಲ್ಲೂ ನೀರಿನ ಕೊರತೆಯಾಗಿದೆ. ಹೀಗಾಗಿ ತೋಟಗಾರಿಕೆ ಬೆಳೆ ರಕ್ಷಣೆಗೆ ಟ್ಯಾಂಕರ್ ನೀರು ಕೊಡಿ ಎಂದು ಅಧಿಕಾರಿಗಳಿಗೆ ಮನವಿ ಮಾಡಿಕೊಂಡಿದ್ದಾರೆ.

ಬಹುವಾರ್ಷಿಕ ತೋಟಗಾರಿಕೆ ಬೆಳೆಯುವ ರೈತರ ಪೈಕಿ ಕೆಲವರು ಈಗಾಗಲೇ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಿ ಬೆಳೆ ರಕ್ಷಣೆಗೆ ಮುಂದಾಗಿದ್ದಾರೆ. ಆದರೆ ಎಲ್ಲ ರೈತರಿಗೂ ಈ ರೀತಿ ಮಾಡಲು ಸಾಧ್ಯವಾಗುತ್ತಿಲ್ಲ.



ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕಿನ ತೋಟಗಾರಿಕೆ ಬೆಳೆ ಬೆಳೆದ ರೈತರ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲಿಸಿದಾಗ ಅಂತರ್ಜಲ ಕುಸಿತವಾಗಿರುವುದು ಗಮನಕ್ಕೆ ಬಂದಿದೆ. ಬೆಳೆ ರಕ್ಷಣೆಗೆ ಟ್ಯಾಂಕರ್ ಮೂಲಕ ನೀರು ಪೂರೈಸುವಂತೆ ರೈತರು ಒತ್ತಾಯಿಸಿದ್ದಾರೆ. ಟ್ಯಾಂಕರ್ ನೀರು ಪೂರೈಕೆ ಕುರಿತು ಇಲಾಖೆಯ ಉಪನಿರ್ದೇಶಕರಿಗೆ ಪತ್ರ ಬರೆಯಲಾಗಿದೆ.

**– ಸುರೇಶ ಕುಂಬಾರ.**
**ಸಹಾಯಕ ನಿರ್ದೇಶಕರು, ತೋಟಗಾರಿಕಾ ಇಲಾಖೆ.**

#### ನೀರು ಪೂರೈಕೆ ಕಷ್ಟ

ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಿ ಬೆಳೆ ರಕ್ಷಣೆ ಮಾಡಿಕೊಳ್ಳುವುದು ಕಷ್ಟ. ಆದರೆ ಕೆಲವು ಉಪಯುಕ್ತ ಕ್ರಮಗಳನ್ನು ಕೈಗೊಂಡು ಬಹುವಾರ್ಷಿಕ ಬೆಳೆಗಳನ್ನು ರಕ್ಷಣೆ ಮಾಡಿಕೊಳ್ಳಬಹುದಾಗಿದೆ. ಮುಖ್ಯವಾಗಿ ಕೀಟ ಬಾಧೆ, ರೋಗಕ್ಕೆ ತುತ್ತಾದ ಬೆಳೆಗಳನ್ನು ಕಿತ್ತು ಒಂದೆಡೆ ಮುಚ್ಚಿ ಹಾಕುವುದು, ಗಿಡದ ಸುತ್ತಲೂ ಪಾತಿ ಮಾಡಿ, ನೆಲಹೊದಿಕೆ ಮಾಡಿಕೊಂಡು ತೇವಾಂಶ ಹಿಡಿದಿಟ್ಟುಕೊಳ್ಳಲು ಅವಕಾಶ ಕಲ್ಪಿಸುವುದು, ಹನಿ ನೀರಾವರಿ ಮೂಲಕ ನೀರು ಪೂರೈಕೆ, ಸಾವಯವ ಗೊಬ್ಬರದ ಜೊತೆಗೆ ಅಣುಜೀವಿ ಗೊಬ್ಬರ ಕೊಟ್ಟು, ಸಾಧ್ಯವಾದರೆ ಮಾತ್ರ ಟ್ಯಾಂಕರ್ ಮೂಲಕ ನೀರು ಪೂರೈಸಿದರೆ ತೋಟಗಾರಿಕೆ ಬೆಳೆ ರಕ್ಷಣೆ ಮಾಡಬಹುದು ಎನ್ನುತ್ತಾರೆ ತೋಟಗಾರಿಕೆ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಸುರೇಶ ಕುಂಬಾರ.

ಹೀಗಾಗಿ ತೋಟಕ್ಕೆ ಭೇಟಿ ನೀಡುವ ಅಧಿಕಾರಿಗಳಿಗೆ ಟ್ಯಾಂಕರ್ ನೀರು ಪೂರೈಕೆ ಮಾಡಿ ಎಂದು ರೈತರು ಒತ್ತಾಯಿಸುತ್ತಿದ್ದಾರೆ.

ಬಹುವಾರ್ಷಿಕ ಬೆಳೆಗಳಿಗೆ ಕಾಲಕಾಲಕ್ಕೆ ನೀರು ಬೇಕೇ ಬೇಕು. ಆದರೆ ಈ ವರ್ಷ ಮಳೆ ಕೊರತೆಯಿಂದ ಅಂತರ್ಜಲ ಕುಸಿತವಾಗಿದೆ. ಬಾವಿ, ಬೋರ್‌ವೆಲ್‌ಗಳಲ್ಲಿಯೂ ನೀರು ಸಿಗುತ್ತಿಲ್ಲ. ನೀರು ಉಣಿಸದಿದ್ದರೆ ಬೆಳೆಗಳು ಬದುಕುವುದು ಕಷ್ಟ. ಕನಿಷ್ಠ ಪಕ್ಷ ಮುಂಗಾರು ಪೂರ್ವ ಮಳೆಯಾಗುವವರೆಗೆ ಉದ್ಯೋಗ ಖಾತ್ರಿ ಯೋಜನೆ ಬಳಸಿಕೊಂಡಾದರೂ ಟ್ಯಾಂಕರ್ ಮೂಲಕ ಒಂದೆರಡು ಬಾರಿ ನೀರು ಕೊಡುವಂಥ ಕೆಲಸ ಮಾಡಿದರೆ ಬೆಳೆಗಳು ರಕ್ಷಣೆಯಾಗುತ್ತವೆ ಎನ್ನುತ್ತಾರೆ ತೋಟಗಾರಿಕೆ ಬೆಳೆಗಾರರು.

## ಅಲ್ಲಮ ಪ್ರಭುದೇವರ ಜಯಂತಿ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಏ. 7ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1588ನೇ ಶರಣ ಸಂಗಮದಲ್ಲಿ ಅಲ್ಲಮ ಪ್ರಭುದೇವರ ಜಯಂತಿ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.



ಅಧ್ಯಕ್ಷತೆಯನ್ನು ಬಸವದಳದ ಹಿರಿಯರಾದ ಶರಣ ಎಸ್.ಎನ್. ಹಕಾರಿ ಇವರು ವಹಿಸುವರು. ನಿವೃತ್ತ ಶಿಕ್ಷಕ, ಶರಣ ಎನ್. ಎಚ್. ಹಿರೇಸಕ್ಕರಗೌಡ್ರ ಇವರು ಉಪನ್ಯಾಸ ಮಾಡುವರು. ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ಬೈರನಹಟ್ಟಿ ಗ್ರಾ.ಪಂ ವ್ಯಾಪ್ತಿಯಲ್ಲಿ ನರೇಗಾ ಕಾಮಗಾರಿ ಸ್ಥಳದಲ್ಲಿ ಮತದಾನ ಜಾಗೃತಿ

# ಇದ್ದೂರಲ್ಲೇ ನರೇಗಾ ಕೆಲಸ

■ ವಿಜಯಸಾಕ್ಷಿ ಸುದ್ದಿ, ನರಗುಂದ

ಗ್ರಾಮದಲ್ಲಿ ಹಬ್ಬ, ಜಾತ್ರೆ ಬಂದರೆ ಇಡೀ ಊರಿಗೆ ಊರೇ ಸ್ವಯಂ ಪ್ರೇರಣೆಯಿಂದ ಕೆಲಸ ಕಾರ್ಯಗಳಲ್ಲಿ ತೊಡಗಿಕೊಂಡು ಹಬ್ಬ ಮತ್ತು ಜಾತ್ರೆಗಳನ್ನು ಯಶಸ್ವಿಗೊಳಿಸುತ್ತಾರೆ. ಹಾಗೆಯೇ ಲೋಕಸಭೆ ಚುನಾವಣೆಯ ಮತದಾನದ ದಿನ ನಮ್ಮೂರಿನ ಹಬ್ಬ ಬಂದಿದೆ ಎಂದು ಎಲ್ಲ ಮತದಾರರನ್ನು ಮತಗಟ್ಟೆಗೆ ಕರೆತಂದು ಮತದಾನ ಮಾಡಿಸುವ ಕೆಲಸ ಪ್ರತಿಯೊಬ್ಬ ಕೂಲಿಕಾರರಿಂದ ಆಗಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರೂ ಆದ ಸೋಮಶೇಖರ್ ಬಿರಾದರ್ ಹೇಳಿದರು.

ತಾಲೂಕಿನ ಬೈರನಹಟ್ಟಿ ಗ್ರಾ.ಪಂ ವ್ಯಾಪ್ತಿಯಲ್ಲಿ ನರೇಗಾ ಕಾಮಗಾರಿ ಸ್ಥಳದಲ್ಲಿ ನಡೆದ ಮತದಾನ ಜಾಗೃತಿ ಚಟುವಟಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಬೇಸಿಗೆಯಲ್ಲಿ ತಂಡೋಪತಂಡವಾಗಿ ನರೇಗಾ ಕೆಲಸಕ್ಕೆ ಬರುವ ಕೂಲಿಕಾರರು ಮತದಾನ ಪ್ರಕ್ರಿಯೆ ಬಗ್ಗೆ ತಿಳಿದುಕೊಂಡಿರಬೇಕು. ಇದಕ್ಕಾಗಿ ಮತದಾನ ಜಾಗೃತಿ ಬಗ್ಗೆ ತಾ.ಪಂ ಸ್ವೀಪ್ ಸಮಿತಿ ವತಿಯಿಂದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಪ್ರತಿಯೊಬ್ಬ ಕೂಲಿಕಾರರು ಕಾಮಗಾರಿ ಸ್ಥಳದಲ್ಲಿ ತಿಳಿದುಕೊಳ್ಳುವ ಮತದಾನ ಜಾಗೃತಿ ಕುರಿತಾದ ವಿಷಯವನ್ನು ಪ್ರತಿ ಮನೆ-ಮನೆಗೂ ತಲುಪಿಸುವ ಕೆಲಸ ಮಾಡಬೇಕು. ಹೀಗಾದಾಗ ಪ್ರತಿಯೊಬ್ಬರೂ ತಮಗೆ ಸಂವಿಧಾನ ನೀಡಿದ ಮತದಾನದ ಹಕ್ಕಿನ ಅರಿವು ಆಗುತ್ತದೆ. ಹಾಗಾದಾಗ ಮಾತ್ರ ದೇಶಕ್ಕೆ ಯೋಗ್ಯ ಸಂಸದರನ್ನು ಆಯ್ಕೆ ಮಾಡಿ ಕಳುಹಿಸುವ ಕೆಲಸವಾಗುತ್ತದೆ ಎಂದರು.



ಬೇಸಿಗೆ ಇದೆ, ಹೊಲದಲ್ಲಿ ಕೆಲಸ ಇಲ್ಲ ಎಂಬ ಚಿಂತೆ ಗ್ರಾಮಸ್ಥರಿಗೆ ಬರುವುದು ಬೇಡ. ಇದ್ದೂರಲ್ಲೇ ನರೇಗಾ ಕೆಲಸ ಆರಂಭವಾಗಿವೆ. ಇದರ ಸದುಪಯೋಗವನ್ನು ಗ್ರಾಮದ ಎಲ್ಲ ಕೂಲಿಕಾರರು ಪಡೆದುಕೊಳ್ಳಬೇಕು. ಬೇಸಿಗೆ ಅವಧಿಯ ಕನಿಷ್ಠ 60 ದಿನಗಳ ನರೇಗಾ ಕಾಮಗಾರಿಯಲ್ಲಿ ಕೆಲಸ ಮಾಡಿದರೆ 20940 ರೂಪಾಯಿ ಸಿಗುತ್ತದೆ. ಇದರಿಂದ ಕುಟುಂಬದ ಆರ್ಥಿಕ ಸಂಕಷ್ಟವನ್ನು ನೀಗಿಸಿಕೊಳ್ಳುವ ಕೆಲಸವಾಗುತ್ತದೆ ಎಂದು ತಿಳಿಹೇಳಿದರು.

ನರೇಗಾ ಕಾಮಗಾರಿ ಸ್ಥಳದಲ್ಲಿದ್ದ 300ಕ್ಕೂ ಅಧಿಕ ಕೂಲಿಕಾರರಿಗೆ ಮತದಾನ ಜಾಗೃತಿ ಕುರಿತಾದ ಪ್ರತಿಜ್ಞಾವಿಧಿಯನ್ನು ಬೈರನಹಟ್ಟಿ ಪಂಚಾಯತ ಅಭಿವೃದ್ಧಿ ಅಧಿಕಾರಿ ಕುಮಾರಿ ನಾಗವೇಣಿ ಅವರು ಬೋಧಿಸಿದರು. ಈ ಸಂದರ್ಭದಲ್ಲಿ ತಾ.ಪಂ ನರೇಗಾ ಸಿಬ್ಬಂದಿ ವರ್ಗ, ಗ್ರಾ.ಪಂ ಸಿಬ್ಬಂದಿ ವರ್ಗದವರು ಹಾಜರಿದ್ದರು.

## 10.76 ಲಕ್ಷ ರೂ. ಅಭಿಸಂಧಾನ ದಂಡ ಶುಲ್ಕ ವಸೂಲು

■ ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು ಮಾಪನಶಾಸ್ತ್ರ ಇಲಾಖೆ ಸಹಾಯಕ ನಿಯಂತ್ರಕರ ಕಚೇರಿಯಿಂದ ಗದಗ ಜಿಲ್ಲೆಯಲ್ಲಿ ಮಾರ್ಚ್-2024ರ ಅಂತ್ಯದವರೆಗೆ ಒಟ್ಟು 1,11,76,869 ರೂ. ಸತ್ಯಾಪನೆ ಶುಲ್ಕ ಸಂಗ್ರಹಿಸಲಾಗಿದೆ.

ಕಿರಾಣಿ ವ್ಯಾಪಾರಸ್ಥರು, ನ್ಯಾಯಬೆಲೆ ಅಂಗಡಿಗಳು, ಇನ್ನಿತರ ಒಟ್ಟು 972 ಅಂಗಡಿಗಳ ತಪಾಸಣೆ ಮಾಡಿ ತಪ್ಪಿತಸ್ಥರ ವಿರುದ್ಧ ಒಟ್ಟು 236 ಮೊಕದ್ದಮೆಗಳನ್ನು ಹೂಡಲಾಗಿದೆ.

ಈ ಮೊಕದ್ದಮೆಗಳನ್ನು ಅಭಿಸಂಧಾನದ ಮೂಲಕ ಇತ್ಯರ್ಥ ಮಾಡಿ, ಮಾರ್ಚ್-2024ರ ಅಂತ್ಯದವರೆಗೆ ಒಟ್ಟು ರೂ.10,76,000 ಅಭಿಸಂಧಾನ ದಂಡದ ಶುಲ್ಕವನ್ನು ವಸೂಲು ಮಾಡಲಾಗಿದೆ. ಯಾವುದೇ ತೂಕ ಮತ್ತು ಅಳತೆಗೆ ಸಂಬಂಧಿಸಿದಂತೆ ದೂರುಗಳಿದ್ದಲ್ಲಿ ಗ್ರಾಹಕರು ಸಹಾಯಕ ನಿಯಂತ್ರಕರು, ಕಾನೂನು ಮಾಪನ ಶಾಸ್ತ್ರ ಇಲಾಖೆ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆವರಣ, ಸಂಕಣ್ಣವರ ಬಡಾವಣೆ ಹತ್ತಿರ-ಗದಗ, ಸಹಾಯವಾಣಿ ಸಂಖ್ಯೆ-18005991100 ಈ ವಿಳಾಸಕ್ಕೆ ಸಂಪರ್ಕಿಸಬಹುದಾಗಿದೆ.

## ಚೆಕ್‌ಪೋಸ್ಟ್‌ಗಳಿಗೆ ಡಿಸಿ ಭೇಟಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ರಾಮಗಿರಿ ಮತ್ತು ಗೋವನಾಳ ಚೆಕ್‌ಪೋಸ್ಟ್‌ಗಳಿಗೆ ಶನಿವಾರ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಮತ್ತು ಎಸ್‌ಪಿ ಬಿ.ಎಸ್. ನೇಮಗೌಡ ಭೇಟಿ ನೀಡಿ ಪರಿಶೀಲಿಸಿ, ಮಾಹಿತಿ ಪಡೆದರು.

ಈ ವೇಳೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಸ್ಥಳದಲ್ಲಿದ್ದ ತಹಸೀಲ್ದಾರ ವಾಸುದೇವಸ್ವಾಮಿ, ತಾ.ಪಂ ಇಓ ಕೃಷ್ಣ ಧರ್ಮರ ಮತ್ತು ಪಿಎಸ್‌ಐ ಈರಣ್ಣ ರಿತ್ತಿ ಅವರಿಗೆ ಚೆಕ್‌ಪೋಸ್ಟ್‌ನಲ್ಲಿ ಕರ್ತವ್ಯ ನಿರ್ವಹಿಸುವ ಯಾವುದೇ ಸಿಬ್ಬಂದಿ ನಿರ್ಲಕ್ಷ್ಯ ತೋರದೇ ಸಂಚರಿಸುವ ಎಲ್ಲ ವಾಹನಗಳನ್ನು ಕಟ್ಟುನಿಟ್ಟಾಗಿ ತಪಾಸಣೆ ಮಾಡಬೇಕು ಮತ್ತು ವಾಹನ ಸವಾರರೊಂದಿಗೆ ಸೌಜನ್ಯದಿಂದ ವರ್ತಿಸಿ. ಚೆಕ್‌ಪೋಸ್ಟ್‌ನಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳಿಗೆ ಅಗತ್ಯ ಸೌಲಭ್ಯ ಕಲ್ಪಿಸಿ. ಅಗತ್ಯವಿದ್ದಲ್ಲಿ ಹೆಚ್ಚುವರಿ ಸಿಬ್ಬಂದಿ ನಿಯೋಜಿಸಿ. ಕರ್ತವ್ಯದಲ್ಲಿದ್ದ ಸಿಬ್ಬಂದಿಗಳು ಯಾವುದೇ ತುರ್ತು ಸಂದರ್ಭದಲ್ಲಿ ಪೊಲೀಸ್ ಮತ್ತು ಕಂದಾಯ ಇಲಾಖೆ ಹಿರಿಯ ಅಧಿಕಾರಿಗಳ ಸಹಾಯ ಪಡೆದುಕೊಳ್ಳಿ ಎಂದು ಸಲಹೆ-ಸೂಚನೆ ನೀಡಿದರು.

ಶನಿವಾರ ತಹಸೀಲ್ದಾರರ ನೇತೃತ್ವದಲ್ಲಿ ರಾಮಗಿರಿ ಚೆಕ್‌ಪೋಸ್ಟ್‌ನಲ್ಲಿ ಸೂಕ್ತ ದಾಖಲೆಯಿಲ್ಲದೇ ಬೈಕ್ ಮೂಲಕ ಸಾಗಿಸಲಾಗುತ್ತಿದ್ದ 95 ಸಾವಿರ ರೂ ನಗದು ವಶಪಡಿಸಿಕೊಳ್ಳಲಾಗಿದೆ.

### ಲಿಂಗಾಯತ ಪ್ರಗತಿಶೀಲ ಸಂಘದ ಶಿವಾನುಭವ ಕಾರ್ಯಕ್ರಮದಲ್ಲಿ ತೋಂಟದ ಸಿದ್ಧರಾಮ ಶ್ರೀಗಳು

## ಶ್ರೇಷ್ಠತೆಯನ್ನು ಬಯಸುವ ಪ್ರತಿಯೊಬ್ಬರೂ ಶರಣರೇ

■ ವಿಜಯಸಾಕ್ಷಿ ಸುದ್ದಿ, ಗದಗ

ಬಸವಾದಿ ಶಿವಶರಣರು ಜಾತಿ, ವರ್ಗ, ವರ್ಣ, ಲಿಂಗಭೇದವನ್ನು ತೊಡೆದು ಹಾಕಿ ಸರ್ವಸಮಾನತೆಯ ಸಮಾಜವನ್ನು ನಿರ್ಮಾಣ ಮಾಡಬೇಕೆಂದು ಕನಸು ಕಂಡಿದ್ದರು. ಬಸವಣ್ಣನವರು ಕಾಯಕ, ದಾಸೋಹ, ಸಮಾನತೆಯ ಹರಿಕಾರರು ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2687ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿ, ಜಾಗತಿಕ ಇತಿಹಾಸದಲ್ಲಿ ದಾಖಲೆಯಾಗುವ ವಿನೂತನ ಸಮಾಜೋಧಾರ್ಮಿಕ ಚಳುವಳಿಯನ್ನು ಬಸವಾದಿ ಶಿವಶರಣರು ನಡೆಸಿದರು. ಸಾಮಾಜೋಧಾರ್ಮಿಕ ಚಳುವಳಿ ಜಾಗತಿಕ ಇತಿಹಾಸದಲ್ಲಿ ಸುವರ್ಣಾಕ್ಷರಗಳಿಂದ ಬರೆದಿಡುವಂತಹ ಕಾಲಘಟ್ಟ. ಸಕಲ ಜೀವಾತ್ಮರಿಗೆ ಲೇಸನ್ನೇ ಬಯಸುವ ನಮ್ಮ ಕೂಡಲಸಂಗಮ ಶರಣರೇ ಕುಲಜರು ಎಂದು ಉಲ್ಲೇಖಿಸಿ ಮಾತನಾಡಿದ ಶ್ರೀಗಳು, ಸಮಾಜದಲ್ಲಿ ಸಕಲ ಜೀವಿಗಳಲ್ಲಿ ಶ್ರೇಷ್ಠತೆಯನ್ನು ಬಯಸುವ ಪ್ರತಿಯೊಬ್ಬ ವ್ಯಕ್ತಿಯೂ ಶರಣರೇ. ಎನಗಿಂತ ಕಿರಿಯರಿಲ್ಲ, ಶಿವಭಕ್ತರಿಗಿಂತ ಹಿರಿಯರಿಲ್ಲ ಎಂದು ಬಸವಣ್ಣನವರು ಎಲ್ಲರಲ್ಲಿಯೂ ಸಮಾನತೆಯನ್ನು ಕಂಡಿದ್ದಾರೆ ಎಂದು ಶ್ರೀಗಳು ಹೇಳಿದರು.



ಮುಳಗುಂದದ ಸಪ್ರದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ರಮೇಶ ಕಲ್ಲನಗೌಡರ ಉಪನ್ಯಾಸ ನೀಡಿ, 12ನೇ ಶತಮಾನ ಜಗತ್ತಿನಲ್ಲಿ ಅದ್ಭುತ ಕ್ರಾಂತಿಗೆ ಸಾಕ್ಷಿಯಾದ ಕಾಲ. ವಿಶ್ವಗುರು ಬಸವಣ್ಣನವರು ಶ್ರೇಷ್ಠ ದಾರ್ಶನಿಕರಲ್ಲಿ ಒಬ್ಬರು. ಅತ್ಯಂತ ಪ್ರೀತ್ಯಾಧಾರದಿಂದ ಡೋಹರ ಕಕ್ಕಯ್ಯನವರನ್ನು ಬಸವಣ್ಣನವರು ತಮ್ಮ ವಚನಗಳಲ್ಲಿ ಸ್ಮರಿಸಿದ್ದಾರೆ. ಬಸವಾದಿ ಶಿವಶರಣರು ಕಾಯಕ, ದಾಸೋಹ, ಸಮಾನತೆ ತತ್ತ್ವಗಳನ್ನು ಸಾರಿದ್ದಾರೆ. ಡೋಹರ ಕಕ್ಕಯ್ಯನವರು ದಾಸೋಹಂಭಾವಿಗಳು, ಕಾಯಕನಿಷ್ಠರು ಆಗಿದ್ದರು ಎಂದರು.

ಕರ್ನಾಟಕ ಸಾಹಿತ್ಯ ಅಕಾಡೆಮಿಗೆ ಸದಸ್ಯರಾಗಿ ನೇಮಕಗೊಂಡ ನಿಮಿತ್ತ ಡಾ. ಅರ್ಜುನ ಗೊಳಸಂಗಿ, ಕರ್ನಾಟಕ ಜಾನಪದ ಅಕಾಡೆಮಿಗೆ ಸದಸ್ಯರಾಗಿ ನೇಮಕಗೊಂಡ ನಿಮಿತ್ತ ಶಂಕ್ರಣ್ಣ ಸಂಕಣ್ಣವರ, ಕರ್ನಾಟಕ ಬಂಜಾರ ಅಕಾಡೆಮಿಗೆ ಸದಸ್ಯರಾಗಿ ನೇಮಕಗೊಂಡ ನಿಮಿತ್ತ ಸಾವಿತ್ರಿಬಾಯಿ ಲಮಾಣಿ ಅವರನ್ನು ಶ್ರೀಗಳು ಸಂಮಾನಿಸಿದರು. ಮೋಹನ ಗಜಾಕೋಶ ಕಾರ್ಯದರ್ಶಿ ಡೋಹರ ಸಮಾಜ ಗದಗ ಅವರು ಮುಖ್ಯಅತಿಥಿಗಳಾಗಿ ಭಾಗವಹಿಸಿದ್ದರು.

ಸುಮತಿ ಮುರಗೋಡ ವಚನಸಂಗೀತ ಹಾಡಿದರು. ಗುರುನಾಥ ಸುತಾರ ತಂಡದವರು ತಬಲಾ ಮತ್ತು ಹಾರ್ಮೋನಿಯಂ ಸಾಥ್ ನೀಡಿದರು. ಧರ್ಮಗ್ರಂಥ ಪಠಣವನ್ನು ಶ್ರೀಗಿರಿ ಗಜಾನನ ವೆರ್ಣೇಕರ, ವಚನ ಚಿಂತನೆಯನ್ನು ಪೂಜಾ ಗಜಾನನ ವೆರ್ಣೇಕರ ಮಾಡಿದರು. ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಕೊಂಡಿದ್ದ ಚನ್ನಬಸಪ್ಪ ಅಂಗಡಿ ಗದಗ ಅವರನ್ನು ಪೂಜ್ಯರು ಸಂಮಾನಿಸಿದರು.

ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

## ಸಂಪಾದಕೀಯ

# ಲೋಕಸಭೆ ಕಣದಲ್ಲಿ ಕೋಟಿ ವೀರರು

ರಾಜಕಾರಣ ಈಗ ಹಣವಂತರ ಸ್ವತ್ತಾಗಿದೆ. ಅದರಲ್ಲೂ ಪ್ರಬಲ ಜಾತಿ- ಜನಾಂಗದ ಬೆಂಬಲ ಇರುವ ಹಣವಂತರು ಮಾತ್ರ ಚುನಾವಣೆಗೆ ಸ್ಪರ್ಧಿಸಲು ಸಾಧ್ಯ ಎನ್ನುವುದು ಇತ್ತೀಚಿನ ವರ್ಷಗಳಲ್ಲಿ ಸರ್ವೆ ಸಾಮಾನ್ಯವಾಗಿದೆ.

ಸದ್ಯ ಲೋಕಸಭೆ ಚುನಾವಣೆಯನ್ನು ಗಮನಿಸಿದಲ್ಲಿ, ಕರ್ನಾಟಕದ 14 ಕ್ಷೇತ್ರಗಳ ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆ ಸಲ್ಲಿಸಿದ್ದಾರೆ. ಜೊತೆಗೆ ತಾವು ಹೊಂದಿರುವ ಆಸ್ತಿಗಳ ಮಾಹಿತಿಯನ್ನು ಆಯೋಗಕ್ಕೆ ನೀಡಿದ್ದಾರೆ. ಹೀಗೆ ಸಲ್ಲಿಸಿದವರ ಪೈಕಿ ಎಲ್ಲರೂ ಕೋಟಿ ವೀರರೆ.

ಮಂಡ್ಯ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸ್ಟಾರ್ ಚಂದ್ರು ಸುಮಾರು 600 ಕೋಟಿ ರೂಪಾಯಿಗೂ ಹೆಚ್ಚಿನ ಸಂಪತ್ತು ಹೊಂದಿದ್ದು, ಸದ್ಯ ಕರ್ನಾಟಕ ಲೋಕಸಭೆ ಚುನಾವಣೆ ಕಣದಲ್ಲಿರುವ ಅತ್ಯಂತ ಶ್ರೀಮಂತ ವ್ಯಕ್ತಿ. ಅದೇ ರೀತಿ ದಕ್ಷಿಣ ಕನ್ನಡ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬ್ರಿಜೇಶ್ ಚೌಟ ಅತ್ಯಂತ ಬಡ ಅಭ್ಯರ್ಥಿ. ಅಂದರೆ ತಮ್ಮ ಆಸ್ತಿ 70 ಲಕ್ಷ ರೂ. ಎಂದು ಘೋಷಿಸಿಕೊಂಡಿದ್ದಾರೆ.

ಬ್ರಿಜೇಶ್ ಅಧಿಕೃತವಾಗಿ ಘೋಷಿಸಿಕೊಂಡಿರುವ ಆಸ್ತಿ 70 ಲಕ್ಷ. ಆದರೆ ಮಾರುಕಟ್ಟೆ ಮೌಲ್ಯಕ್ಕೆ ಹೋಲಿಕೆ ಮಾಡಿದರೆ ಅವರೂ ಕೋಟಿ ವೀರರೆ. ಇನ್ನು ಇನ್ನುಳಿದ ಅಬ್ಯರ್ಥಿಗಳು ಅಧಿಕೃತವಾಗಿಯೇ ಕೋಟಿ ಕೋಟಿ ಆಸ್ತಿಯನ್ನು ಘೋಷಿಸಿಕೊಂಡಿದ್ದಾರೆ. ಅವರಿವರ ಹೆಸರಿನಲ್ಲಿ, ಬೇನಾಮಿ ಹೆಸರಿನಲ್ಲಿ ಗಳಿಸಿದ, ಉಳಿಸಿದ ಸಂಪತ್ತು ಎಷ್ಟು ಎನ್ನುವದನ್ನು ಜನರೇ ಲೆಕ್ಕ ಹಾಕಬೇಕು.

ಕೇವಲ 5 ವರ್ಷದಲ್ಲಿ ತೇಜಸ್ವಿ ಸೂರ್ಯ ಆಸ್ತಿ 100 ಪಟ್ಟು ಹೆಚ್ಚಾಗಿದೆ ಎನ್ನುವ ಮಾಹಿತಿ ಇದೆ. ಇದು ಕೇವಲ ತೇಜಸ್ವಿ ಸೂರ್ಯ ಒಬ್ಬರ ಕಥೆಯಲ್ಲ. ಕೇವಲ ಐದು ವರ್ಷ ಅಧಿಕಾರ ಅನುಭವಿಸಿದ ಪ್ರತಿಯೊಬ್ಬರೂ ಕೋಟಿ ಲೆಕ್ಕದಲ್ಲಿದ್ದಾರೆ. ಒಮ್ಮೆ ಅಧಿಕಾರ ಸಿಕ್ಕರೆ ಸಂಪತ್ತು ದ್ವಿಗುಣಗೊಳ್ಳುವುದು ಅತ್ಯಂತ ಸಾಮಾನ್ಯ. ಆದರೆ ಹಲವು ಪಟ್ಟು ದ್ವಿಗುಣಗೊಂಡಿರುವುದು ಅನುಮಾನ ಮೂಡಿಸುತ್ತದೆ. ಆ ಬಗ್ಗೆ ಧ್ವನಿ ಎತ್ತುವಂತಿಲ್ಲ. ತನಿಖೆ ನಡೆಯುವುದೂ ಇಲ್ಲ.

ಸದ್ಯಕ್ಕೆ ಲೋಕಸಭೆ ಚುನಾವಣೆ ಕಣದಲ್ಲಿ ಕೋಟಿ ವೀರರೇ ರಾರಾಜಿಸುತ್ತಿದ್ದಾರೆ. ಹಣ, ಹೆಂಡ ಹಂಚಲು ಎಷ್ಟು ಕೋಟಿ ಇದ್ದರೂ ಕಡಿಮೆಯೇ. ಹಣಬಲ, ಜಾತಿಬಲ ಮತ್ತು ಹಂಚಲು ಹೆಂಡದ ಬಲ ಪಡೆಯಲು ಕೋಟಿ ಬೇಕೆ ಬೇಕು. ಅಂದಾಗ ಮಾತ್ರ ರಾಜಕಾರಣ ಮಾಡಲು ಸಾಧ್ಯ. ಭವಿಷ್ಯದಲ್ಲಿ ರಾಜಕಾರಣಕ್ಕೆ ಕೋಟಿ ಬೆಲೆ ಬಾಳುವವರೆ ಬರಬೇಕು ಎನ್ನುವ ಲಿಖಿತ ನಿಯಮ ಜಾರಿಯಾದರೂ ಅಚ್ಚರಿಪಡಬೇಕಿಲ್ಲ.

## ಇಲ್ಲಿನ ಜನರು ತಿಂಗಳುಗಟ್ಟಲೆ ತಮ್ಮ ವಾಹನದ ಇಂಜಿನ್ ನಿಲ್ಲಿಸುವುದೇ ಇಲ್ಲ!

# ಅತ್ಯಂತ ಶೀತದ 'ಒಯ್ಯಂಕಾನ್'





ಇಲ್ಲಿ ಕುದುರೆ, ನಾಯಿ ಮತ್ತು ಹಿಮಸಾರಂಗಗಳಂತಹ ಪ್ರಾಣಿಗಳಷ್ಟೇ ಬದುಕಬಲ್ಲವು. ಹಸುಗಳನ್ನು ಸಾಕುತ್ತಾರಾದರೂ, ಹಾಲು ಕೆಚ್ಚಲಿನಲ್ಲಿಯೇ ಐಸ್ ಆಗದಂತೆ ತಡೆಯಲು ಕೆಚ್ಚಲಿಗೆ ವಿಶಿಷ್ಟವಾದ ಬಟ್ಟೆ ಹೊದೆಸುತ್ತಾರೆ. ಇಲ್ಲಿನ ನಿವಾಸಿಗಳ ಸರಾಸರಿ ಜೀವಿತಾವಧಿ 55 ವರ್ಷಗಳು ಮಾತ್ರ. ಇಲ್ಲಿನ ಭೂಪ್ರದೇಶವೆಲ್ಲಾ ಕಲ್ಲಿನಷ್ಟು ಗಟ್ಟಿಯಾಗಿ ಹೆಪ್ಪುಗಟ್ಟುವುದರಿಂದ ಮೃತದೇಹವನ್ನು ಹೂಳುವುದೇ ತಲೆನೋವಾಗುತ್ತದೆ. ಭೂಮಿಯನ್ನು ಮೆದುವಾಗಿಸಲು ವಾರಗಳವರೆಗೂ ಬೆಂಕಿ ಉರಿಸಬೇಕು, ನಂತರ ಹಿಮ ಕರಗಿದಾಗ ಶವಪೆಟ್ಟಿಗೆಯನ್ನು ಹೂಳಬೇಕಾಗುತ್ತದ

ಸಾಮಾನ್ಯವಾಗಿ ಎಲ್ಲರೂ ಊಟಿ, ಕೊಡೈಕೆನಾಲ್, ಕಾಶ್ಮೀರ, ಕೊನೆಗೆ ಹಿಮಾಲಯದಂತಹ ತಣ್ಣನೆಯ ಜಾಗಕ್ಕೆ ಒಮ್ಮೆ ಭೇಟಿ ನೀಡಬೇಕು ಎಂಬ ಮಹದಾಸೆಯನ್ನು ಹೊಂದಿರುತ್ತಾರೆ. ಕಾರಣ, ಅಲ್ಲಿನ ಬಿಳಿ ಬಿಳಿ ಹಿಮದ ರಾಶಿ, ಮೈಕೊರೆಯುವ ಚಳಿ, ಅಗ್ಗಿಷ್ಟಿಕೆಯ ಬೆಂಕಿಯ ಮುಂದೆ ಕುಳಿತು ಮೈ ಕಾಯಿಸಿಕೊಳ್ಳುವುದು, ಆಗಾಗ ಬಿಸ್ಸಿಬಿಸಿಯಾದ ಟೀ, ಕಾಫಿ... ಆಹಾ! ಸ್ವರ್ಗ ಅಂದ್ರೆ ಇದೇ ಇರಬೇಕು ಅನ್ನಿಸದೇ ಇರೋದಿಲ್ಲ ಬಿಡಿ.

ಅದಿರಲಿ, ಇಷ್ಟೆಲ್ಲಾ ಆದಮೇಲೆ, ಜಗತ್ತಿನಲ್ಲಿಯೇ ಜನವಸತಿಯಿರುವ ಅತ್ಯಂತ ಶೀತ ಪ್ರದೇಶ ಯಾವುದಿರಬಹುದು ಎಂಬ ಪ್ರಶ್ನೆ ಒಮ್ಮೆಯಾದರೂ ಕಾಡಿರುತ್ತದೆ. ಅಲ್ಲಿಗೆ ಹೋಗೋಕೆ ಆಗುತ್ತೋ ಬಿಡುತ್ತೋ ಗೊತ್ತಿಲ್ಲ. ಆದ್ರೆ, ಪ್ರಶ್ನೆಗೆ ಉತ್ತರವನ್ನಾದರೂ ತಿಳಿದುಕೊಳ್ಳಬಹುದಲ್ಲ?!

***

ಹೀಗೊಂದು ಊರಿದೆ. ಇಲ್ಲಿ, ಚಳಿ ಅದಿನ್ಯಾವ ಹಂತದಲ್ಲಿರಬಹುದು ಎಂಬದನ್ನು ಕೂತಲ್ಲಿಯೇ ಊಹಿಸಲು ಒಂದೆರಡು ಸನ್ನಿವೇಶಗಳನ್ನು ಹೇಳಿಬಿಡುತ್ತೇನೆ. ನಮ್ಮಲ್ಲಿ ಚಳಿ ಹೆಚ್ಚಾದರೆ, ಸ್ವೆಟರ್ ಹಾಕಿಕೊಂಡು ಮೇಲೊಂದು ಶಾಲನ್ನೋ, ಚಾದರವನ್ನೋ ಹೊದ್ದು ಬೆಚ್ಚಗೆ ಕೂತುಬಿಡುತ್ತೇವೆ. ಈ ಊರಿನಲ್ಲಿ ಚಳಿಗಾಲವೆಂತಲ್ಲ, ವರ್ಷವಿಡೀ ತಮ್ಮ ಮನೆಯನ್ನು ಬೆಚ್ಚಗಿಡಲು ಕಟ್ಟಿಗೆ ಅಥವಾ ಕಲ್ಲಿದ್ದಲ್ಲನ್ನು ಉರಿಸುತ್ತಲೇ ಇರುತ್ತಾರೆ.

ಇನ್ನೂ ಒಂದು ವಿಷಯ, ಅರ್ಜೆಂಟಾಗಿ ಎಲ್ಲಿಯಾದರೂ ಹೊರಡಬೇಕೆಂದರೆ ಇಲ್ಲಿ ಅದು ಸಾಧ್ಯವೇ ಇಲ್ಲ. ಕನಿಷ್ಠ 15-20 ನಿಮಿಷ ಕಾಯಲೇಬೇಕು. ಯಾಕೆಂದರೆ, ಗ್ಯಾರೇಜ್ ಒಳಗೆ ನಿಲ್ಲಿಸಿದ ವಾಹನ ಸ್ಟಾರ್ಟ್ ಮಾಡಿದರೆ ಇಂಜಿನ್ ಬೆಚ್ಚಗಾಗಲು ಅಷ್ಟು ಸಮಯ ತೆಗೆದುಕೊಳ್ಳುತ್ತದೆ! ಇನ್ನು ಗ್ಯಾರೇಜ್ ಹೊರತಾಗಿ, ಹೊರಗೆಲ್ಲೋ ವಾಹನ ನಿಲ್ಲಿಸುವ ಸಂದರ್ಭವಿದ್ದರೆ, ಟ್ರಕ್‌ನಂತಹ ಭಾರೀ ವಾಹನಗಳ ಇಂಜಿನ್ ಬಂದ್ ಮಾಡುವಂತೆಯೇ ಇಲ್ಲ!

ಅಬ್ಬಬ್ಬಾ, ಹೀಗೂ ಒಂದು ಊರಿದೆಯಾ, ಅಲ್ಲಿ ಜನವಸತಿಯೂ ಇದೆಯಾ ಎಂದು ಅಚ್ಚರಿ ಪಡಬೇಡಿ. ಅಂಥದೊಂದು ಊರಿದೆ. ಅದೇ ರಷ್ಯಾದ ಒಮಿಯಾಕೋನ್! ಈ ಪ್ರದೇಶ ಭೂಮಿಯ ಮೇಲಿನ ಜನವಸತಿ ಸ್ಥಳದಲ್ಲಿ ಅತ್ಯಂತ ಶೀತದ ಪ್ರದೇಶ ಎಂಬ ದಾಖಲೆ ಬರೆದಿದೆ. ಇದು ರಷ್ಯಾದ ಯಕುಟಿಯಾದ ಪೂರ್ವಕ್ಕೆ ಸುಮಾರು 500 ಕಿಲೋಮೀಟರ್ ದೂರದಲ್ಲಿರುವ ಒಯ್ಯಂಕೊನ್ ಗ್ರಾಮದ (ಇತರ ಭಾಷೆಗಳಲ್ಲಿ ಒಯಿಮ್ಯಾಕಾನ್ ಎಂದು ಉಚ್ಚರಿಸಲಾಗುತ್ತದೆ) 1933ರಲ್ಲಿ ದಾಖಲೆಯ ತಾಪಮಾನ ಮೈನಸ್ 78 ಡಿಗ್ರಿಗೆ ಇಳಿದಿತ್ತು. ಇದು ಜನವಸತಿ ಸ್ಥಳಕ್ಕಾಗಿ ವಿಶ್ವ ದಾಖಲೆಯಾಗಿದೆ.

ಸ್ಥಳೀಯ ಜನಸಂಖ್ಯೆಯ ಆತಿಥ್ಯವು ಕಠಿಣ ಹವಾಮಾನ ಪರಿಸ್ಥಿತಿಗಳಿಗೆ ತೀಕ್ಷ್ಣವಾದ ವ್ಯತಿರಿಕ್ತತೆಯನ್ನು ರೂಪಿಸುತ್ತದೆ. ಅಂತ್ಯವಿಲ್ಲದ ಟೈಗಾದ ಮೌನ ಮತ್ತು ಸೌಂದರ್ಯವು ಚಳಿಗಾಲದಲ್ಲಿ ಯಾಕುಟಿಯಾವನ್ನು ವಿಪರೀತ ಮಾತ್ರವಲ್ಲದೆ ಅದರ ಶಕ್ತಿಯಿಂದ ಅದ್ಭುತ ಸ್ಥಳವನ್ನಾಗಿ ರೂಪಿಸುತ್ತದೆ. ವಿಪರ್ಯಾಸವೆಂದರೆ, ಒಯ್ಮ್ಯಾಕಾನ್ ಎಂದರೆ ಇವೆಂಕಿ ಭಾಷೆಯಲ್ಲಿ ಒಯ್ಯಂಕಾನ್‌ಗೆ ಹತ್ತಿರವಿರುವ ಬಿಸಿನೀರಿನ ಬುಗ್ಗೆಗಳ ಕಾರಣದಿಂದಾಗಿ 'ಹೆಪ್ಪುಗಟ್ಟದ ವಸಂತ' ಎಂದು ಅರ್ಥೈಸುತ್ತದೆ. ದೂರದ ಉತ್ತರದಲ್ಲಿ ಅದರ ಸ್ಥಾನವನ್ನು ಹೊರತುಪಡಿಸಿ, ಸಮುದ್ರ ಮಟ್ಟದಿಂದ ಸುಮಾರು 1,000 ಮೀಟರ್ ಎತ್ತರದಲ್ಲಿದೆ ಮತ್ತು ಜಲಾನಯನ ಪ್ರದೇಶದಲ್ಲಿ ಅದರ ಸ್ಥಳವು ಹಳ್ಳಿಗೆ ಹರಿಯುವ ಶೀತ ಮಾರುತಗಳು ಅಸಾಧಾರಣ ಶೀತಕ್ಕೆ ಕಾರಣವಾಗುತ್ತವೆ. ತಂಪಾದ ಗಾಳಿಯು ತಳಭಾಗಕ್ಕೆ ಹರಿಯುತ್ತದೆ ಮತ್ತು ಬೆಚ್ಚಗಿನ ಗಾಳಿಯನ್ನು ಮೇಲಕ್ಕೆ ತಳ್ಳುತ್ತದೆ.

ಒಯ್ಯಂಕಾನ್‌ನಲ್ಲಿ ವಾಸವಿರುವುದು ಸರಿಸುಮಾರು 500 ನಿವಾಸಿಗಳು ಮಾತ್ರ. ಇವರೆಲ್ಲರೂ ಈ ಪ್ರದೇಶದ ತೀವ್ರ ಶೀತದ ಜೀವನಕ್ಕೆ ಹೊಂದಿಕೊಂಡಿದ್ದಾರೆ. ಸ್ಥಳೀಯ ಶಾಲೆ ಮೈನಸ್ 55 ಡಿಗ್ರಿ ಮಟ್ಟವನ್ನು ತಲುಪುವ ತಾಪಮಾನದಲ್ಲಿ ಮಾತ್ರ ಬಾಗಿಲು ಮುಚ್ಚುತ್ತದೆ. ಈ ಉಷ್ಣಾಂಶದ ದಿನಗಳನ್ನು ಹೊರತುಪಡಿಸಿ, ಸ್ಥಳೀಯ ಜನರು ಸಾಕಷ್ಟು ಸಾಮಾನ್ಯ ಜೀವನವನ್ನು ನಡೆಸುತ್ತಾರೆ.

ಇದು ಭೂಮಿಯ ಮೇಲಿನ ಅತ್ಯಂತ ತಂಪಾದ ಜನವಸತಿ ಪ್ರದೇಶವೆಂದು ಹೆಸರುವಾಸಿಯಾಗಿದ್ದರೂ, ಬೇಸಿಗೆಯು ಸಾಕಷ್ಟು ಬೆಚ್ಚಗಿರುತ್ತದೆ. ಬೇಸಿಗೆಯ ತಿಂಗಳುಗಳಲ್ಲಿ, ಜುಲೈ ಮತ್ತು ಆಗಸ್ಟ್‌ನಲ್ಲಿ, ತಾಪಮಾನವು 20ರಿಂದ 30 ಡಿಗ್ರಿಗಳವರೆಗೆ ಇರುತ್ತದೆ. ಇಲ್ಲಿ, ಗಮನಿಸಲೇಬೇಕಾದ ಅದೆಷ್ಟೋ ಸಂಗತಿಗಳಿವೆ. ಈ ಪ್ರದೇಶದಲ್ಲಿ ಮರ, ಕಬ್ಬಿಣದಂತಹ ಲೋಹದ ವಸ್ತುಗಳನ್ನು ಬರಿಗೈಯಲ್ಲಿ ಒಂದು ನಿಮಿಷಕ್ಕಿಂತಲೂ ಹೆಚ್ಚು ಕಾಲ ಹಿಡಿದುಕೊಳ್ಳುವುದು ಸಾಧ್ಯವಿಲ್ಲ. ಹಾಗೆ ಹಿಡಿದುಕೊಂಡರೆ, ನಮ್ಮ ಚರ್ಮ ಆ ವಸ್ತುವಿಗೆ ಅಂಟಿಕೊಂಡುಬಿಡುತ್ತದೆ ಮತ್ತು, ಬಿಡಿಸಿಕೊಳ್ಳಲು ಪ್ರಯತ್ನಿಸಿದರೆ ಚರ್ಮ ಕಿತ್ತು ಬರುತ್ತದೆ.

ಹಾಗಾದರೆ, ಇಲ್ಲಿ ಪ್ರವಾಸೋದ್ಯಮ ಉತ್ತಮವಾಗಿದ್ದೀತು ಎಂದುಕೊಂಡರೆ ತಪ್ಪು. ಇಲ್ಲಿನ ವಿಪರೀತ ಶೀತದ ಕಾರಣಕ್ಕೆ ಪ್ರವಾಸಿಗರೇನೂ ಭೇಟಿ ನೀಡುವುದಿಲ್ಲ. ಅಲ್ಲೇನಿದ್ದರೂ ವಿಜ್ಞಾನಿಗಳು ಮತ್ತು ಮಾಧ್ಯಮ ಪ್ರತಿನಿಧಿಗಳು ಭೇಟಿ ನೀಡುತ್ತಿರುತ್ತಾರೆ ಅಷ್ಟೇ. ಕೆಲವೊಮ್ಮೆ ಕ್ರೀಡಾಪಟುಗಳು ವಿಶ್ರಾಂತಿ ಪಡೆಯಲು ಇಲ್ಲಿ ನಿಲ್ಲುತ್ತಾರೆ. ವಾಹನಗಳನ್ನು ನಿಲ್ಲಿಸುವ ಶೆಡ್‌ಗಳಲ್ಲಿ ಸ್ಟವ್‌ಗಳು ಉರಿಯುತ್ತಲೇ ಇರಬೇಕು. ವಾಹನಗಳಿಗೆ ಸೀಮೆಎಣ್ಣೆ ಮತ್ತು ಡೀಸಲ್ ಮಿಶ್ರಣದ ಆರ್ಕ್ಟಿಕ್ ಡೀಸಲ್ ಬಳಸಬೇಕಾಗುತ್ತದೆ. ಟ್ರಕ್ ಚಾಲಕರು ತಿಂಗಳುಗಟ್ಟಲೆ ಇಂಜಿನ್ ನಿಲ್ಲಿಸುವುದೇ ಇಲ್ಲ.

**- ಸತೀಶ್ ಭಟ್, ಮಾಗೋಡ್.**



■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ತಾಲೂಕ ಮಾಗಡಿ ಗ್ರಾಮದಲ್ಲಿ ಶನಿವಾರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್. ಅವರು ಭೇಟಿ ನೀಡಿ ಜೆಜೆಎಂ ಕಾಮಗಾರಿ ಹಾಗೂ 2023-24ನೇ ಸಾಲಿನ ತಾಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಅನಿರ್ಬಂಧಿತ ಅನುದಾನದಡಿಯಲ್ಲಿ ಕೈಕೊಂಡ ಕಾಮಗಾರಿಗಳ ವೀಕ್ಷಣೆ ಮಾಡಿದರು.

## ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮೀಪದ ಒಡೆಯರ ಮಲ್ಲಾಪುರ ಮೊರಾರ್ಜಿ ವಸತಿ ಶಾಲೆಯ ಎಸ್‌ಎಸ್‌ಎಲ್‌ಸಿಯ 50 ವಿದ್ಯಾರ್ಥಿಗಳಿಗೆ ಶಾಲೆಯ ಚಿತ್ರಕಲಾ ಶಿಕ್ಷಕ ಪ್ರವೀಣ ಗಾಯಕರ ವಿದ್ಯಾರ್ಥಿಗಳ ಭಾವಚಿತ್ರಗಳ ವಿಶೇಷ ಉಡುಗೊರೆ ನೀಡಿ ಬೀಳ್ಕೊಟ್ಟರು.

ಈ ವೇಳೆ ಹಿರಿಯ ಶಿಕ್ಷಕಿ ಎಂ.ಆಯ್. ಡಂಬಳ ಮಾತನಾಡಿ, ಎಸ್‌ಎಸ್‌ಎಲ್‌ಸಿ ನಂತರ ಪಿಯುಸಿ, ಉನ್ನತ ಹಂತದ ಶಿಕ್ಷಣಕ್ಕೆ ಹೋಗುವ ವಿದ್ಯಾರ್ಥಿಗಳಾದ ನೀವು ಕಲಿಸಿದ ಗುರುಗಳು, ಶಾಲೆ, ತಂದೆ-ತಾಯಿಗಳ ಕೀರ್ತಿ ಹೆಚ್ಚಿಸುವ ಮೂಲಕ ಸಮಾಜದ ಉತ್ತಮ ಪ್ರಜೆಗಳಾಗಿ ಬಾಳಬೇಕು ಎಂದರು.

ಶಿಕ್ಷಕರಾದ ಎಸ್.ಕೆ. ನಧಾಫ್, ಆರ್.ಎಚ್. ಮನ್ನಂಗಿ, ಎ.ಎ. ವಠಾರ, ಎಸ್.ಎ. ಮುಲ್ಲಾ, ವಿ.ಹೆಚ್. ರಾಠೋಡ, ಎಫ್.ಸಿ. ಹಮಸಾಗರ, ಎಸ್.ಎನ್. ತಳ್ಳಳ್ಳಿ, ಮುಕ್ತಾ ಆದಿ, ಎಸ್.ಎ. ಬೆಟಗೇರಿ, ಎಸ್.ಆರ್. ಮಾಡಳ್ಳಿ ಸೇರಿ ಸಿಬ್ಬಂದಿಗಳಿದ್ದರು.



■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿಯ ಸರ್ಕಾರಿ ಪ್ರಥಮದರ್ಜೆ ಕಾಲೇಜು ಪಿ.ಜಿ ಅಧ್ಯಯನ ಕೇಂದ್ರದಲ್ಲಿ ಶನಿವಾರ ಮತದಾನ ಜಾಗೃತಿ ಜಾಥಾ ಜರುಗಿತು. ಪ್ರಾಂಶುಪಾಲ ಡಾ. ಎಸ್.ಎಫ್. ಸಿದ್ನೇಕೊಪ್ಪ ಜಾಥಾಕ್ಕೆ ಚಾಲನೆ ನೀಡಿದರು. ಜಾಥಾವನ್ನು ನೇಕಾರ ಕಾಲೋನಿ, ಬಸ್ ಸ್ಟ್ಯಾಂಡ್, ತರಕಾರಿ ಮಾರುಕಟ್ಟೆಗಳಲ್ಲಿ ಹಮ್ಮಿಕೊಳ್ಳಲಾಗಿತ್ತು.

## ಘಟಿಕೋತ್ಸವಕ್ಕೆ ಅಧಿಸೂಚನೆ ಆಹ್ವಾನ

■ **ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ವಿಶ್ವವಿದ್ಯಾಲಯದ 2023ನೇ ಸಾಲಿನ 74ನೇ ಘಟಿಕೋತ್ಸವಕ್ಕೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಅಧಿಸೂಚನೆಯನ್ನು ಅಂತರ್ಜಾಲ www.kud.ac.in ತಾಣದಲ್ಲಿ ಲಿಂಕ್ https://kud convocation.aargeessoftware.com/ ಹಾಗೂ UUCMS ತಂತ್ರಾಂಶದ ಮೂಲಕ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಘಟಿಕೋತ್ಸವ ಶಾಖೆಯ ದೂರವಾಣಿ ಸಂಖ್ಯೆ 0836-2215256 ಸಂಪರ್ಕಿಸಬಹುದಾಗಿದೆ ಎಂದು ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕ ಸಭೆ ಇಂದು

■ **ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಉಸುಗಿನಗಟ್ಟಿ ಓಣಿಯ ಪ್ರಸಿದ್ಧ ಶ್ರೀ ಗಂಜೀಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಗಂಜೀಬಸವೇಶ್ವರ ದೇವಸ್ಥಾನದಲ್ಲಿ ಏ.7ರ ರಾತ್ರಿ 8 ಗಂಟೆಗೆ ಸಾರ್ವಜನಿಕ ಸಭೆ ಕರೆಯಲಾಗಿದ್ದು, ಸಭೆಯಲ್ಲಿ 61ನೇ ವರ್ಷದ ಲೆಕ್ಕ ತಪಾಸಣೆ ಹಾಗೂ 62ನೇ ವರ್ಷದ ಹೊಸ ಪದಾಧಿಕಾರಿಗಳ ಆಯ್ಕೆಯು ಕುರಿತು ಚರ್ಚಿಸಲಾಗುವುದು.

ಓಣಿಯ ಗುರು ಹಿರಿಯರು, ದೇವಸ್ಥಾನದ ಕಮಿಟಿಯ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು, ಯುವಕರು ಸಭೆಗೆ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಜಾತ್ರಾ ಕಮಿಟಿಯ ಅಧ್ಯಕ್ಷ ಪರಪ್ಪ ಫಕೀರಪ್ಪ ಕಮತರ ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದ್ದಾರೆ.



## ಭಾರತ ವಿಶ್ವಗುರುವಾಗಿ ಹೊರಹೊಮ್ಮಲಿದೆ



■ **ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಬಿಜೆಪಿ ಪಕ್ಷವು ಜಗತ್ತಿನಲ್ಲಿ ಅತೀ ಹೆಚ್ಚು ಕಾರ್ಯಕರ್ತರನ್ನು ಹೊಂದಿರುವ ಪಕ್ಷವಾಗಿದ್ದು, ಅನೇಕ ಮಹನೀಯರ ತ್ಯಾಗ ಬಲಿದಾನ ಮತ್ತು ರಾಷ್ಟ್ರೀಯ ಸೇವಾ ಮನೋಭಾವನೆಯಿಂದ ಇಂದು ಬೇರೆ ದೇಶಗಳು ಭಾರತದೆಡೆಗೆ ಚಿತ್ತ ಹರಿಸುವಂತೆ ಮಾಡಿದ ಕೀರ್ತಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲುತ್ತದೆ ಎಂದು ಶಿರಹಟ್ಟಿ ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ ಹೇಳಿದರು.

ಅವರು ಶನಿವಾರ ಶಿರಹಟ್ಟಿ ಪಟ್ಟಣದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಅವರ ನಿವಾಸದಲ್ಲಿ ಪಕ್ಷದ ವತಿಯಿಂದ ಬಿಜೆಪಿ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮುಂಬರುವ ದಿನಗಳಲ್ಲಿ ಭಾರತ ವಿಶ್ವಗುರುವಾಗಿ ಹೊರಹೊಮ್ಮಲಿದೆ. ಪಕ್ಷಕ್ಕಾಗಿ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ಅನೇಕ ಮಹನೀಯರನ್ನು ಪ್ರತಿಯೊಬ್ಬ ಕಾರ್ಯಕರ್ತರು ಸ್ಮರಿಸುವುದರ ಜೊತೆಗೆ ಅವರ ಆದರ್ಶಗಳನ್ನು ಪಾಲಿಸಬೇಕೆಂದು ಕರೆ ನೀಡಿದರು.

ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಫಕೀರೇಶ ರಟ್ಟಿಹಳ್ಳಿ, ಶಿರಹಟ್ಟಿ ವಿಧಾನಸಭಾದ ಲೋಕಸಭಾ ಚುನಾವಣೆಯ ಸಂಚಾಲಕ ಬಸವರಾಜ ಪಲ್ಲೇದ ಮಾತನಾಡಿ, ಬಿಜೆಪಿ ಪಕ್ಷಕ್ಕೆ ಕಾರ್ಯಕರ್ತರೇ ಜೀವಾಳವಾಗಿದ್ದು ಸಾಮಾನ್ಯ ವ್ಯಕ್ತಿಗೂ ಉನ್ನತ ಹುದ್ದೆಯನ್ನು ನೀಡುವಲ್ಲಿ ಬಿಜೆಪಿ ಪಕ್ಷ ಯಾವತ್ತೂ ಮುಂದೆ ಇರುತ್ತದೆ. ರಾಷ್ಟ್ರವಾದಿ ಮನೋಭಾವ ಹೊಂದಿರುವ ಬಿಜೆಪಿಯ ತತ್ವ-ಸಿದ್ಧಾಂತಗಳಿಂದ ಇಂದು ದೇಶ ಅಭಿವೃದ್ಧಿಯತ್ತ ಸಾಗುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಸದಸ್ಯ ಸಂದೀಪ ಕಪ್ಪತ್ತನವರ, ತಾಲೂಕಾ ಮಹಿಳಾ ಮಂಡಳ ಅಧ್ಯಕ್ಷೆ ನಂದಾ ಪಲ್ಲೇದ, ಅಲ್ಪಸಂಖ್ಯಾತ ಅಧ್ಯಕ್ಷ ಅಕ್ಬರಸಾಬ ಯಾದಗಿರಿ, ನಗರ ಮಹಿಳಾ ಘಟಕದ ಅಧ್ಯಕ್ಷರಾದ ರೂಪ ಪಾಶ್ಚಾಪುರ, ಯಲ್ಲಪ್ಪ ಇಂಗಳಗಿ, ರಾಜು ಕಪ್ಪತ್ನವರ, ಪರಶು ಡೊಂಕುಬಳ್ಳಿ, ಮುತ್ತಣ್ಣ ಕಲಾದಗಿ, ವೀರಣ್ಣ ಅಂಗಡಿ, ಅಶೋಕ್ ವರವಿ, ಬಸವರಾಜ ವಡವಿ ಮುಂತಾದವರು ಉಪಸ್ಥಿತರಿದ್ದರು.

# ತಪ್ಪಿತಸ್ಥರನ್ನು ಬಂಧಿಸುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ



■ **ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರತ್ನ ಡಾ. ಪುನೀತರಾಜಕುಮಾರ ಅವರ ಧರ್ಮಪತ್ನಿ ಅಶ್ವಿನಿ ಪುನೀತರಾಜಕುಮಾರ ಬಗ್ಗೆ ಅವಹೇಳನಕಾರಿ ಪೋಸ್ಟ್ ಮಾಡಿದ ತಪ್ಪಿತಸ್ಥರನ್ನು ಕೂಡಲೇ ಬಂಧಿಸುವಂತೆ ಗದಗ ಜಿಲ್ಲಾಧಿಕಾರಿಗಳಿಗೆ, ಕರ್ನಾಟಕ ಡಾ. ರಾಜಕುಮಾರ ಅಭಿಮಾನಿಗಳ ಸಂಘಗಳ ಒಕ್ಕೂಟ, ಡಾ. ಶಿವರಾಜಕುಮಾರ ಅಭಿಮಾನಿಗಳ ಸಂಘ, ರಾಜರತ್ನ ಪುನೀತರಾಜಕುಮಾರ ಅಭಿಮಾನಿಗಳ ಸಂಘಗಳ ಜಿಲ್ಲಾ ಘಟಕದ ವತಿಯಿಂದ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಸಂಗಾಪೂರ ಮಾತನಾಡಿ, ಅಶ್ವಿನಿ ಪುನೀತ ರಾಜಕುಮರ ಅವರ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಗಜಪಡೆ ಎಂಬ ನಕಲಿ ಫೇಸ್‌ಬುಕ್ ಖಾತೆಯನ್ನು ತೆರೆದು, ಅಶ್ಲೀಲವಾಗಿ ಮತ್ತು ಹಗುರವಾಗಿ ಪೋಸ್ಟ್ ಮಾಡಿದ್ದಾರೆ. ಇದರಿಂದ ಕರ್ನಾಟಕದಾದ್ಯಂತ ಪುನೀತ್ ರಾಜಕುಮಾರ ಅಭಿಮಾನಿಗಳ ಮನಸ್ಸಿಗೆ ನೋವಾಗಿದೆ. ತಪ್ಪಿತಸ್ಥರನ್ನು ಕೂಡಲೇ ಬಂಧಿಸಿ ಅವರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಮಘದ ಪದಾಧಿಕಾರಿಗಳಾದ ವಿಠ್ಠಲ ಪರಾಪೂರ, ರಾಘವೇಂದ್ರ ಪರಾಪೂರ, ಮೈಲಾರಪ್ಪ ವಿ.ಚಳ್ಳಮರದ, ಗಣೇಶ ಹುಬ್ಬಳ್ಳಿ, ನಾಗರಾಜ ಗುತ್ತಿ, ಮೇಘನಾ ಎಂ.ಕೊಟ್ಟೂರು, ವಿನಾಯಕ ಗಜಕೋಶ, ರಾಜು ಅಗಸಿನಕೊಪ್ಪ, ಗಿರೀಶ, ವಿನಯ, ಗಣೇಶ, ಆಕಾಶ, ಸೇರಿದಂತೆ ಡಾ. ಪುನೀತರಾಜಕುಮಾರ ಅಭಿಮಾನಿಗಳು ಉಪಸ್ಥಿತರಿದ್ದರು.

# ಕೊಣ್ಣೂರು ಚೆಕ್‌ಪೋಸ್ಟ್‌ಗೆ ಅಧಿಕಾರಿಗಳ ಭೇಟಿ




■ವಿಜಯಸಾಕ್ಷಿ ಸುದ್ದಿ, ನರಗುಂದ

ಲೋಕಸಭಾ ಸಾರ್ವತ್ರಿಕ ಚುನಾವಣೆಯ ಹಿನ್ನೆಲೆಯಲ್ಲಿ ನರಗುಂದ ಕಾರ್ಯನಿರ್ವಾಹಕ ಅಧಿಕಾರಿ ಬಿರಾದರ್ ನರಗುಂದ ವಿಧಾನಸಭಾ ಕ್ಷೇತ್ರದ ಚುನಾವಣೆ ತರಬೇತಿ ಕೇಂದ್ರ ಹಾಗೂ ಕೊಣ್ಣೂರ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕೆಲವು ವಾಹನಗಳನ್ನು ತಡೆದ ಇಓ ಅವರು, ಸೂಕ್ತ ದಾಖಲೆಗಳಿಲ್ಲದೇ ಹಣ, ಮದ್ಯ, ಚಿನ್ನಾಭರಣ ಹಾಗೂ ವಾಣಿಜ್ಯ ಸರಕುಗಳನ್ನು ಸಾಗಾಟ ಮಾಡಲಾಗುತ್ತಿರುವ ಬಗ್ಗೆ ಪರಿಶೀಲಿಸಿದರು. ಅಲ್ಲದೇ ಸ್ಥಳದಲ್ಲಿದ್ದ ಚೆಕ್‌ಪೋಸ್ಟ್ ಸಿಬ್ಬಂದಿಗಳಿಗೆ ಚುನಾವಣೆ ಅಕ್ರಮದಲ್ಲಿ ಯಾರೇ ಭಾಗಿಯಾದರೂ ಅಂತವರ ವಿರುದ್ಧ ಮುಲಾಜಿಲ್ಲದೇ ಚುನಾವಣೆ ನಿಯಮಾನುಸಾರ ಕ್ರಮಕ್ಕೆ ಮುಂದಾಗಬೇಕು ಎಂದು ಸೂಚಿಸಿದರು.

### ಏ. 8ರಿಂದ 10ರವರೆಗೆ ಶ್ರೀ ಕರಿಯಮ್ಮ ದೇವಿಯ 95 ನೇ ಜಾತ್ರಾ ಮಹೋತ್ಸವ

# ವಿಜೃಂಭಣೆಯ ಜಾತ್ರೆ, ಸಾಂಸ್ಕೃತಿಕ ವೈಭವ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಐತಿಹಾಸಿಕ ಶ್ರೀ ಕರಿಯಮ್ಮದೇವಿಯ 95ನೇ ಜಾತ್ರಾ ಮಹೋತ್ಸವವು ಏಪ್ರಿಲ್ 8ರಿಂದ 10ರವರೆಗೆ 3 ದಿನಗಳ ಕಾಲ ನಡೆಯಲಿದೆ. ನಂತರ ಸಾಂಸ್ಕೃತಿಕ ಕಾರ್ಯಕ್ರಮ, ಅನ್ನಸಂತರ್ಪಣೆ, ಚಂಡಿಕಾಹೋಮ, ರಂಗೋಲಿ ಸ್ಪರ್ಧೆ, ಬೆಳ್ಳಿ ಉತ್ಸವ ಮೂರ್ತಿ ದರ್ಶನ, ಕಡುಬಿನ ಕಾಳಗ ನಡೆಯಲಿದೆ. ಈ ಜಾತ್ರೆ ಸಾವಿರಾರು ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ಅತೀ ವಿಜೃಂಭಣೆಯಿಂದ ನಡೆಯಲಿದೆ ಎಂದು ಜಾತ್ರಾ ಸಮಿತಿ ಗೌರವಾಧ್ಯಕ್ಷ ಎಲ್.ಡಿ. ಚಂದಾವರಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಜಾತ್ರೆಯ ಮುನ್ನ ಸೋಮವಾರ ಕರಿಯಮ್ಮದೇವಿ ಬೆಳ್ಳಿ ಉತ್ಸವ ಮೂರ್ತಿಯನ್ನು ಭಕ್ತರ ದರ್ಶನಕ್ಕೆ ಇಡಲಾಗುವುದು. ನಂತರ ಸಾಂಸ್ಕೃತಿಕ ಸ್ಪರ್ಧೆಗಳು ನಡೆಯಲಿದ್ದು, ಶ್ರೀ ಕರಿಯಮ್ಮದೇವಿ ಸುಧಾರಣಾ ಸಮಿತಿ ಅಧ್ಯಕ್ಷ ಸಿ.ಕೆ. ಮಾಳಶೆಟ್ಟಿ ಉದ್ಘಾಟಿಸಲಿದ್ದಾರೆ ಎಂದರು.

ಸಾಯಂಕಾಲ 6ಗಂಟೆಗೆ ಜಾತ್ರಾ ಪ್ರಾರಂಭೋತ್ಸವ ನಡೆಯಲಿದ್ದು, ದಿವ್ಯ ಸಾನ್ನಿಧ್ಯವನ್ನು ಷ. ಬ್ರ. ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಿಕೊಳ್ಳಲಿದ್ದು, ಅಧ್ಯಕ್ಷತೆಯನ್ನು ಎಲ್.ಡಿ. ಚಂದಾವರಿ, ಮುಖ್ಯ ಅತಿಥಿಯಾಗಿ ನಗರಸಭೆ ಸದಸ್ಯರಾದ ವಿಜಯಲಕ್ಷ್ಮೀ ದಿಂಡೂರ, ಜಾತ್ರಾ ಸಮಿತಿ ಅಧ್ಯಕ್ಷರಾದ ಜಗದೀಶ್ ಎಸ್.ಪಿ. ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿರಲಿದ್ದಾರೆ. ನಂತರ ದಾನಿಗಳಿಗೆ ಹಾಗೂ ಗಣ್ಯ ವ್ಯಕ್ತಿಗಳಿಗೆ ಸನ್ಮಾನ ಕಾರ್ಯಕ್ರಮ ಆಯೋಜಿಸಿದ್ದೇವೆ ಎಂದು ಮಾಹಿತಿ ನೀಡಿದರು.

ಏ. 9ರಂದು ಸಕಲ ವಾದ್ಯಗಳೊಂದಿಗೆ ಶ್ರೀದೇವಿಯ ಪಾಲಕಿ ಉತ್ಸವ, ಕುಂಭಮೇಳ, ಶ್ರೀಚಕ್ರ ಮಹಿಳಾ ಕಲಾ ತಂಡದಿಂದ ಡೊಳ್ಳು ಕುಣಿತ ಮತ್ತು ಗೊಂಬೆ ಕುಣಿತಗಳೊಂದಿಗೆ ಬಡಾವಣೆಯ ಪ್ರಮುಖ ಬೀದಿಗಳಲ್ಲಿ ಸಂಚರಿಸಲಿದ್ದು, ಸಾಯಂಕಾಲ ಮಹಾರಥೋತ್ಸವ ನಡೆಯಲಿದೆ. ನಂತರ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ಈ ಕಾರ್ಯಕ್ರಮಗಳ ಅಧ್ಯಕ್ಷತೆಯನ್ನು ಜಾತ್ರಾ ಸಮಿತಿ ಅಧ್ಯಕ್ಷರಾದ ಜಗದೀಶ್ ಎಸ್.ಪಿ ವಹಿಸಿಕೊಳ್ಳಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಶ್ರೀ ಕರಿಯಮ್ಮದೇವಿ ಬಡಾವಣೆ ಸುಧಾರಣಾ ಸಮಿತಿ ಕಾರ್ಯಾಧ್ಯಕ್ಷರಾದ ಸಿ.ಕೆ. ಮಾಳಶೆಟ್ಟಿ, ಶಶಿಧರ ದಿಂಡೂರ, ಬಸವರಾಜ ನರೆಗಲ್, 2024ನೇ ಸಾಲಿನ ಶ್ರೀ ಕರಿಯಮ್ಮದೇವಿ ಜಾತ್ರಾ ಸಮಿತಿ ಅಧ್ಯಕ್ಷರಾದ ಜಗದೀಶ್ ಎಸ್.ಪಿ, ವಿಜಯಲಕ್ಷ್ಮೀ ದಿಂಡೂರ, ಶಶಿಧರ್ ದಿಂಡೂರ, ಶಂಕರ ಹಾನಗಲ್ಲ ಸೇರಿದಂತೆ ಇತರರು ಉಪಸ್ಥಿತರಿದ್ದರು.




ಜಾತ್ರಾ ಮಹೋತ್ಸವದ ಕೊನೆಯ ದಿನ ಏ. 10ರಂದು ಅನ್ನಸಂತರ್ಪಣೆ ನಡೆಯಲಿದ್ದು, ಸಾಯಂಕಾಲ 6 ಗಂಟೆಗೆ ಕಡುಬಿನ ಕಾಳಗ, ನಂತರ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಈ ಕಾರ್ಯಕ್ರಮಗಳ ಅಧ್ಯಕ್ಷತೆಯನ್ನು ಶ್ರೀ ಕರಿಯಮ್ಮದೇವಿ ಬಡಾವಣೆ ಸುಧಾರಣಾ ಸಮಿತಿ ಕಾರ್ಯಾಧ್ಯಕ್ಷರಾದ ಸಿ.ಕೆ ಮಾಳಶೆಟ್ಟಿ ವಹಿಸಿಕೊಳ್ಳಲಿದ್ದು, ಮುಖ್ಯ ಅತಿಥಿಗಳಾಗಿ ಮಂಜುನಾಥ ಪೂಜಾರ, ಗೋವಿಂದಪ್ಪ ಗೌಡಪ್ಪಗೋಳ, ಎಲ್.ಡಿ. ಚಂದಾವರಿ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.



ಲಕ್ಷ್ಮೇಶ್ವರದ ಹಾವಳಿ ಆಂಜನೇಯ ದೇವಸ್ಥಾನದಲ್ಲಿ ಆಂಜನೇಯ ಮೂರ್ತಿಗೆ ಶನಿವಾರ ವಿಶೇಷ ಅಲಂಕಾರ ಪೂಜೆ ನೆರವೇರಿಸಲಾಗಿತ್ತು.

### ಹೊಗರೆಖಾನ್ ಗಿರಿ ಶ್ರೀ ಸಿದ್ಧೇಶ್ವರಸ್ವಾಮಿ ಮಂಡಲ ಪೂಜಾ ಕಾರ್ಯಕ್ರಮದಲ್ಲಿ ರಂಭಾಪುರಿ ಶ್ರೀಗಳು

# ಆದರ್ಶ ಬದುಕಿಗೆ ಧರ್ಮಾಚರಣೆ ಮುಖ್ಯ

■ವಿಜಯಸಾಕ್ಷಿ ಸುದ್ದಿ, ಕಡೂರು

ಈಶ ನಿರ್ಮಿತವಾದ ಪ್ರಪಂಚದಲ್ಲಿ ಭಗವಂತ ಎಲ್ಲವನ್ನು ಕೊಟ್ಟಿದ್ದಾನೆ. ಅದರ ಕೃತಜ್ಞತೆಯನ್ನು ಅರಿತು ಬಾಳಿದರೆ ಜೀವನ ಸುಖಮಯ. ಆದರ್ಶ ನೆಮ್ಮದಿಯ ಬದು-ಕಿಗೆ ಧರ್ಮಾಚರಣೆ ಅತ್ಯಂತ ಮುಖ್ಯವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ಹೊಗರೆಖಾನ್ ಗಿರಿ ಶ್ರೀ ಸಿದ್ಧೇಶ್ವರಸ್ವಾಮಿ ಮಂಡಲ ಪೂಜಾ ನಿಮಿತ್ತ ಜರುಗಿದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವ ಜನ್ಮ ಶ್ರೇಷ್ಠವಾದುದು. ಯಾವುದು ಸರಿ, ಯಾವುದು ತಪ್ಪು ಎಂಬುದನ್ನು ತಿಳಿಯುವ ಬುದ್ಧಿ ಶಕ್ತಿಯಿದೆ. ಅರಿವುಳ್ಳ ಜನ್ಮದಲ್ಲಿ ಹುಟ್ಟಿದ ಮೇಲೆ ಶಿವಜ್ಞಾನ ಪ್ರಾಪ್ತಿಗಾಗಿ ಗುರು ಕಾರುಣ್ಯಕ್ಕಾಗಿ ಶ್ರಮಿಸಬೇಕು. ಅರಿತು ಆಚರಿಸಿ ಬದುಕಿದರೆ ಬದುಕಿನ ಶ್ರೇಯಸ್ಸಿಗೆ ಕಾರಣವಾಗುತ್ತದೆ. ಮರೆತು ಮಲಗಿದರೆ ಬದುಕು ದುರ್ಬಲಗೊಳ್ಳುತ್ತದೆ. ವೀರಶೈವ ಧರ್ಮದಲ್ಲಿ ತತ್ವ ತ್ರಯಗಳ ಮೂಲಕ ಜೀವನದಲ್ಲಿ ಶ್ರೇಯಸ್ಸು ಪ್ರಾಪ್ತವಾಗುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ನಿರೂಪಿಸಿದ್ದಾರೆ.

ಅಂಗ ಅವಗುಣ ನೀಗಿ, ಲಿಂಗ ಗುಣ ಸಂಪನ್ನರಾಗಿ ಬದುಕಿ ಬಾಳಲು ವೀರಶೈವ ಧರ್ಮ ಬೋಧಿಸಿದೆ. ಸಕಲ ಜೀವಾತ್ಮರ ಒಳಿತನ್ನೇ ಬಯಸಿದ ವೀರಶೈವ ಧರ್ಮ ಕಾಲ ಕಾಲದಲ್ಲಿ ಮಾರ್ಗದರ್ಶನ ನೀಡಿದೆ ಎಂದರು.

ಹುಣಸಘಟ್ಟ ಹಾಲುಸ್ವಾಮಿ ಮಠದ ಗುರುಮೂರ್ತಿ ಶಿವಾಚಾರ್ಯರು, ಶಂಕರದೇವರಮಠದ ಚಂದ್ರಶೇಖರ ಶಿವಾಚಾರ್ಯರು, ತೆಂಡೇಕೆರೆ ಗಂಗಾಧರ ಶಿವಾಚಾರ್ಯರು, ಹಣ್ಣೆ ಮಠದ ಮರುಳಸಿದ್ಧ ಪಂಡಿತಾರಾಧ್ಯ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಉಮಾಶಂಕರ್, ಚಂದ್ರಶೇಖರ, ರಾಜು ತರೀಕೆರೆ, ಉಮೇಶ ಹೊಗರೆಹಳ್ಳಿ, ರೇಣುಕಯ್ಯ ಹೊಗರೇಹಳ್ಳಿ, ರುದ್ರಯ್ಯ ಹಾಗೂ ಸಿದ್ದಯ್ಯ ಹೊಗರೆಖಾನ ಗಿರಿ ಮೊದಲಾದವರು ಉಪಸ್ಥಿತರಿದ್ದರು. ಸಹಸ್ರಾರು ಭಕ್ತರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳವರ ಆಶೀರ್ವಾದ ಪಡೆದರು.

ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳು ಲೋಕ ಕಲ್ಯಾಣಾರ್ಥವಾಗಿ ಇಷ್ಟಲಿಂಗ ಮಹಾಪೂಜಾ ನೆರವೇರಿಸಿ ಭಕ್ತ ಸಂಕುಲಕ್ಕೆ ಶುಭ ಹಾರೈಸಿದರು.



ನೇತೃತ್ವ ವಹಿಸಿದ ಬೀರೂರು ಶ್ರೀ ರಂಭಾಪುರಿ ಖಾಸಾ ಶಾಖಾ ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ತತ್ವ ಸಿದ್ಧಾಂತಗಳು ಜೀವನ ವಿಕಾಸಕ್ಕೆ ಅಡಿಪಾಯವಾಗಿವೆ. ಅಹಿಂಸಾದಿ ಧ್ಯಾನ ಪರ್ಯಂತರವಾದ ಚಿಂತನೆಗಳು ಸರ್ವರ ಬಾಳಿಗೆ ಬೆಳಕು ತೋರುತ್ತವೆ ಎಂದರು.

### ತಾಲೂಕಿನಲ್ಲಿ ಬೊಮ್ಮಾಯಿ ಪರ ಮಾಜಿ ಸಚಿವ ಬಂಡಿ ಮತಯಾಚನೆ

# ಬಿಜೆಪಿಯಿಂದ ಪಾರದರ್ಶಕ ಆಡಳಿತಕ್ಕೆ ಆದ್ಯತೆ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಹಾವೇರಿ-ಗದಗ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಶನಿವಾರ ತಾಲೂಕಿನ ಬೆಣಚಮಟ್ಟಿ, ನಾಗರಸಕೊಪ್ಪ ಹಾಗೂ ನಾಗರಸಕೊಪ್ಪ ತಾಂಡಾದಲ್ಲಿ ಸೇರಿ ವಿವಿಧ ಗ್ರಾಮಗಳಲ್ಲಿ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರವಾಗಿ ಮಾಜಿ ಸಚಿವ ಕಳಕಪ್ಪ ಬಂಡಿ ಬಿರುಸಿನ ಪ್ರಚಾರ ನಡೆಸಿದರು.

ಈ ವೇಳೆ ಮಾಜಿ ಸಚಿವ ಕಳಕಪ್ಪ ಬಂಡಿ ಮಾತನಾಡಿ, ದೇಶದಲ್ಲಿ ಕಳೆದ 10 ವರ್ಷದಲ್ಲಿ ಆಗಿರುವ ಅಭಿವೃದ್ಧಿ ಕಾರ್ಯಗಳು ಮತ್ತು ವಿಶ್ವ ಮಟ್ಟದಲ್ಲಿ ಭಾರತವನ್ನು ವಿಶ್ವಗುರುವನ್ನಾಗಿಸುವ ದಿಸೆಯಲ್ಲಿ ಪ್ರಧಾನಿ ಮೋದಿ ಅವರು ಕೈಗೊಂಡಿರುವ ರಾಜತಾಂತ್ರಿಕ ವಿಷಯಗಳಿಂದ ವಿಶ್ವದ ಬಲಿಷ್ಠ ರಾಷ್ಟ್ರಗಳ ಪಟ್ಟಿಯಲ್ಲಿ ಭಾರತವು ಸ್ಥಾನವನ್ನು ಪಡೆದಿದೆ. ಅಲ್ಲದೆ ಮೋದಿ ಅವರ ಜನಪರ ಹಾಗೂ ಪಾರದರ್ಶಕ ಆಡಳಿತದೊಂದಿಗೆ ದೇಶದ ಸಂಸ್ಕೃತಿ, ಪರಂಪರೆಯನ್ನು ಎತ್ತಿ ಹಿಡಿಯುವ ಕೆಲಸವನ್ನು ಮಾಡಿದ್ದಾರೆ.

ಪರಿಣಾಮ, ಕೋಟ್ಯಾಂತರ ಜನರ ಆಶಯವಾಗಿದ್ದ ರಾಮಮಂದಿರ ನಿರ್ಮಾಣ ಸೇರಿ ಅನೇಕ ಧಾರ್ಮಿಕ ಕ್ಷೇತ್ರಗಳನ್ನು ಅಭಿವೃದ್ಧಿ ಪಡಿಸಿದ ಕೀರ್ತಿ ಮೋದಿ ಅವರಿಗೆ ಸಲ್ಲುತ್ತದೆ ಎಂದ ಅವರು, ದೇಶ ಹಾಗೂ ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತವು ಜನವಿರೋಧಿ ಹಾಗೂ ರೈತವಿರೋಧಿ ಎನ್ನುವದಕ್ಕೆ ಪುಷ್ಠಿ ನೀಡುವ ಹಲವಾರು ಯೋಜನೆಗಳ ಜತೆಗೆ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ನಡೆದ ಅನೇಕ ಹಗರಣಗಳು ದೇಶದ ಜನತೆಯ ನೆನಪಿನಿಂದ ಮಾಸುತ್ತಿಲ್ಲ. ಆದರೆ ಮೋದಿ ಅವರು ದೇಶದ ಪ್ರಧಾನಿ ಆದ ದಿನದಿಂದ ಇಂದಿನವರೆಗೂ ಸಹ ದೇಶದಲ್ಲಿ ಪಾರದರ್ಶಕ ಆಡಳಿತಕ್ಕೆ ಆದ್ಯತೆ ನೀಡಿದ್ದಾರೆ. ಹೀಗಾಗಿ ಹಳ್ಳಿಯಿಂದ ಹಿಡಿದು ದಿಲ್ಲಿಯವರೆಗೆ ಪ್ರಧಾನಿ ಮೋದಿ ಪರವಾದ ಘೋಷಣೆಗಳನ್ನು ಯುವ ಸಮೂಹ ಕೂಗುತ್ತಿದೆ ಎಂದರು.

ಈ ವೇಳೆ ಉಮೇಶ ಮಲ್ಲಾಪೂರ, ನೀಲಪ್ಪ ಗುರಿಕಾರ, ಮುತ್ತಯ್ಯ ಕಾರಡಗಿಮಠ, ಅಂದಪ್ಪ ಅಂಗಡಿ, ಕೃಷ್ಣಾ ಪೂಜಾರ, ಪರಶುರಾಮ ಗಡಾದ, ಚನ್ನಬಸಯ್ಯ ಹಿರೇಮಠ, ಬಸಯ್ಯ ಹಿರೇಮಠ, ಶೇಖಪ್ಪ ಪೂಜಾರ, ತುಳಜಪ್ಪ ಮಾಳಿ, ಮಲ್ಲು ಕುರಿ, ಕಳಕಪ್ಪ ಅಗಸಿಮುಂದಿನ ಸೇರಿ ಇತರರು ಇದ್ದರು.



ಬಿಜೆಪಿ ರೋಣ ಮಂಡಲದ ಅಧ್ಯಕ್ಷ ಮುತ್ತಣ್ಣ ಕಡಗದ ಮಾತನಾಡಿ, ಪ್ರಧಾನಿ ಮೋದಿ ಅವರ ಅಭಿವೃದ್ಧಿ ಆಡಳಿತ ಒಂದೆಡೆಯಾದರೆ, 1 ಲಕ್ಷ 50 ಸಾವಿರ ಕೋಟಿ ಸಾಲ ತಂದಿರುವ ಸಿಎಂ ಸಿದ್ದರಾಮಯ್ಯ ಕರ್ನಾಟಕದ ಜನರನ್ನು ಸಾಲದ ಸುಳಿಗೆ ಸಿಲುಕಿಸಿದ್ದಾರೆ. ಕಳಸಾ ಬಂಡೂರಿ ಯೋಜನೆ ಒಂದು ಹಂತಕ್ಕೆ ಬಂದು ನಿಲ್ಲಲು ಬೊಮ್ಮಾಯಿ ಅವರು ಪ್ರಮುಖರು. ವಿಪಕ್ಷಗಳಿಗೆ ತಕ್ಕಪಾಠ ಕಲಿಸಲು ಹಾಗೂ ಭಾರತವನ್ನು ಮತ್ತಷ್ಟು ಬಲಿಷ್ಠ ಹಾಗೂ ಸದೃಢ ದೇಶವನ್ನಾಗಿಸಲು ಹಾವೇರಿ-ಗದಗ ಲೋಕಸಭಾ ಕ್ಷೇತ್ರದಿಂದ ಬಸವರಾಜ ಬೊಮ್ಮಾಯಿ ಅವರನ್ನು ಗೆಲ್ಲಿಸುವ ಮೂಲಕ ಮೋದಿ ಅವರ ಕೈ ಬಲಪಡಿಸೋಣ ಎಂದರು.

# ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿಯ ಯುವ ಮೋರ್ಚಾದ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಲಕ್ಷ್ಮೇಶ್ವರದ ಯುವ ಮುಖಂಡ ಶಕ್ತಿ ಕತ್ತಿ ನೇಮಕಗೊಂಡಿದ್ದಾರೆ. ಪಕ್ಷದ ಜಿಲ್ಲಾ ಅಧ್ಯಕ್ಷ ರಾಜು ಕುರಡಗಿ ನೇಮಕಾದೇಶ ಮಾಡಿದ್ದಾರೆ.



ಗದಗ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಚುನಾವಣಾ ನೋಡಲ್ ಅಧಿಕಾರಿ ಮಾಣಿಕರಾವ್ ಪಾಟೀಲ ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿ, ಕುಲಸಚಿವ ಡಾ.ಸುರೇಶ ನಾಡಗೌಡರ ಅವರೊಂದಿಗೆ ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಚುನಾವಣಾ ಭಾಗವಹಿಸುವಿಕೆ (SVEEP) ಕಾರ್ಯಕ್ರಮ ಹಮ್ಮಿಕೊಳ್ಳುವ ಕುರಿತು ಚರ್ಚಿಸಿದರು.

# ಮತದಾನ ಜಾಗೃತಿ ಅಭಿಯಾನ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆಯಲ್ಲಿ ಯಾರೂ ಕೂಡ ಮತದಾನದಿಂದ ಹೊರಗುಳಿಯದೇ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ತಾ.ಪಂ ಕಾರ್ಯ ನಿರ್ವಾಹಕ ಅಧಿಕಾರಿ ಮಾಣಿಕರಾವ್ ಪಾಟೀಲ್ ಹೇಳಿದರು.

ಜಿಲ್ಲಾ ಹಾಗೂ ತಾಲೂಕಾ ಸ್ವೀಪ್ ಸಮಿತಿ ಸೇರಿದಂತೆ ಗ್ರಾಮ ಪಂಚಾಯತ ಸೊರಟೂರ ಸಹಯೋಗದಲ್ಲಿ ಸೊರಟೂರ ಗ್ರಾ.ಪಂ ವ್ಯಾಪ್ತಿಯ ಮಹಾಲಿಂಗಪುರ ಗ್ರಾಮದಲ್ಲಿ ನರೇಗಾ ಕಾಮಗಾರಿ ಸ್ಥಳದಲ್ಲಿ ಶನಿವಾರ ಮತದಾನ ಜಾಗೃತಿ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ಮಾತನಾಡಿದ ಅವರು 18 ವರ್ಷ ತುಂಬಿದ ಯುವ ಮತದಾರರಿಗೆ



VHA App ದಲ್ಲಿ ನೋಂದಾಯಿಸಲು ಕರೆ ನೀಡಿದರು. ಮತದಾನ ಪ್ರಕ್ರಿಯೆಯಿಂದ ಯಾವೊಬ್ಬ ವ್ಯಕ್ತಿಯೂ ಹೊರಗುಳಿಯಬಾರದು ಎಂದು ತಿಳಿಸಿದರು.

ಮತದಾನದ ಬಗ್ಗೆ ಜಾಗೃತಿ ಮೂಡಿಸುತ್ತಾ ಬೇಸಿಗೆ ಅವಧಿಯಲ್ಲಿ ನರೇಗಾ ಯೋಜನೆಯಡಿ ಎಲ್ಲ ಕೂಲಿಕಾರರಿಗೆ ನಿರಂತರವಾಗಿ ಕೆಲಸ ನೀಡಲಾಗುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಕೂಲಿ ಕೆಲಸದಲ್ಲಿ ತೊಡಗಿಸಿಕೊಳ್ಳುವಂತೆ ತಿಳಿಸಿದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿ ಮಾಲತೇಶ್ ಮೇವುಂಡಿ ಮತದಾನದ ಪ್ರತಿಜ್ಞಾವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ಗ್ರಾ.ಪಂ ಸಿಬ್ಬಂದಿಗಳು, ತಾಲೂಕು ನರೇಗಾ ಸಿಬ್ಬಂದಿಗಳು ಹಾಜರಿದ್ದರು.

# ನಿಧನ ವಾರ್ತೆ

## ಸರೋಜಾ ಸಾಲಿಮಠ



ಹುಬ್ಬಳ್ಳಿ: ದೇಶಪಾಂಡೆ ನಗರದ ನಿವಾಸಿ ಸರೋಜಾ ಸಾಲಿಮಠ (48) ಅವರು ಶನಿವಾರ ಅನಾರೋಗ್ಯದ ಕಾರಣ ನಿಧನರಾದರು. ಅವರು ಓರ್ವ ಪುತ್ರ, ಓರ್ವ ಪುತ್ರಿ ಮತ್ತು ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ನಗರದ ವಿದ್ಯಾನಗರ ಮುಕ್ತಿಧಾಮದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಂತಾಪ: ಸರೋಜಾ ಸಾಲಿಮಠ ನಿಧನಕ್ಕೆ ಧಾರವಾಡ ಕೆಎಂಎಫ್ ಮಾಜಿ ಅಧ್ಯಕ್ಷ ನೀಲಕಂಠ ಅಸೂಟಿ, ಧಾರವಾಡ ಬಾಲವಿಕಾಸ ಅಕಾಡೆಮಿ ಮಾಜಿ ಅಧ್ಯಕ್ಷ ವೇದವ್ಯಾಸ ಹ. ಕೌಲಗಿ ಸಂತಾಪ ಸೂಚಿಸಿದ್ದಾರೆ.

### ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಬಿಜೆಪಿ ಸಂಸ್ಥಾಪನಾ ದಿನ ಆಚರಣೆ

# ಬಿಜೆಪಿ ಪಕ್ಷ ಹೆಮ್ಮರವಾಗಿ ಬೆಳೆದಿದೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಬಿಜೆಪಿ ಸಂಸ್ಥಾಪನಾ ದಿನಚಾರಣೆಯನ್ನು ಜಿಲ್ಲಾ ಬಿಜೆಪಿ ಅಧ್ಯಕ್ಷರ ನೇತೃತ್ವದಲ್ಲಿ ಆಚರಿಸಲಾಯಿತು.

ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಮಾತನಾಡಿ, 1980 ಏಪ್ರಿಲ್ 6ರಲ್ಲಿ ಭಾರತೀಯ ಜನತಾ ಪಕ್ಷದ ಉದಯವಾಯಿತು. ಅದಕ್ಕಿಂತ ಪೂರ್ವದಲ್ಲಿ 1951ರಲ್ಲಿ ಜನಸಂಘವನ್ನು ಶ್ಯಾಮ್ ಪ್ರಸಾದ ಮುಖರ್ಜಿ ಹಾಗೂ ಪಂಡಿತ್ ದೀನ ದಯಾಳ ಉಪಾಧ್ಯಯರ ನೇತೃತ್ವದಲ್ಲಿ ಪ್ರಾರಂಭಿಸಲಾಯಿತು. 1975ರಲ್ಲಿ ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರು ದೇಶದಲ್ಲಿ ತುರ್ತು ಪರಿಸ್ಥೀತಿಯನ್ನು ಜಾರಿಗೆ ತಂದು, ದೇಶದಲ್ಲಿರುವ ಎಲ್ಲ ವಿರೋಧ ಪಕ್ಷದ ಧುರೀಣರನ್ನು ಜೈಲಿಗೆ ಕಳುಹಿಸಿ ಆಡಳಿತ ನಡೆಸಿದರು. ತುರ್ತು ಪರಿಸ್ಥಿತಿ ಹಿಂಪಡೆದ ನಂತರ ಜಯಪ್ರಕಾಶ ನಾರಾಯಣ ಅವರ ನೇತೃತ್ವದಲ್ಲಿ ದೇಶದ ಎಲ್ಲ ರಾಜಕೀಯ ಪಕ್ಷಗಳು ಜನತಾ ಪಕ್ಷದಲ್ಲಿ ವಿಲೀನವಾದವು. ಅದರಂತೆ ಜನಸಂಘವು ಕೂಡಾ ಜನತಾ ಪಕ್ಷದಲ್ಲಿ ವಿಲೀನವಾಯಿತು. ನಂತರ ಜನತಾ ಪಕ್ಷದಿಂದ ಹೊರಬಂದ ಜನಸಂಘದ ನಾಯಕರು 1980 ಏಪ್ರಿಲ್ 6ರಂದು ಭಾರತೀಯ ಜನತಾ ಪಾರ್ಟಿಯನ್ನು ಸ್ಥಾಪಿಸಿದರು.

ಅಲ್ಲಿಂದ ಇಲ್ಲಿಯವರೆಗೆ ಬಿಜೆಪಿ ಪಕ್ಷ ಹೆಮ್ಮರವಾಗಿ ಬೆಳೆದು, ಕಳೆದ 10 ವರ್ಷಗಳಿಂದ ದೇಶದ ಅಧಿಕಾರದ ಚುಕ್ಕಾಣಿಯನ್ನು ಹಿಡಿಯಿತು. ಅದಕ್ಕೂ ಪೂರ್ವದಲ್ಲಿ ಅಟಲ್ ಬಿಹಾರಿ ವಾಜಪೇಯಿ ಅವರ ನೇತೃತ್ವದಲ್ಲಿ ಸಮ್ಮಿಶ್ರ ಸರ್ಕಾರದಲ್ಲಿ ಅಧಿಕಾರವನ್ನು ನಡೆಸಿದರು. ಈ ರೀತಿಯಾಗಿ ಬಿಜೆಪಿ ಪಕ್ಷ ಬೆಳೆದು ಬಂದಿದೆ ಎಂದು ರಾಜು ಕುರುಡಗಿ ನುಡಿದರು.

ಈ ಸಂದರ್ಭದಲ್ಲಿ ಹಿರಿಯರಾದ ಜಗನ್ನಾಥಸಾ ಭಾಂಡಗೆ, ರಾಜಕುಮಾರ ಬಸವಾ, ಪಕ್ಕಿರೇಶ ರಟ್ಟಿಹಳ್ಳಿ, ಅನಿಲ ಅಬ್ಬಿಗೇರಿ, ಕೆ.ಪಿ. ಕೋಟಿಗೌಡ್ರ, ರಾಜು ಹೊಂಗಲ, ಭದ್ರೇಶ ಕುಸ್ಲಾಪೂರ, ಬೂದಪ್ಪ ಹಳ್ಳಿ, ದ್ಯಾಮಣ್ಣ ನೀಲಗುಂದ, ಸಂತೋಷ ಅಕ್ಕಿ, ನಿಂಗಪ್ಪ ಹುಗ್ಗಿ, ಮಹಾದೇವಪ್ಪ ಚಿಂಚಲಿ, ರಮೇಶ ಮಜ್ಜಿಗುಡ್ಡ, ಸುಭಾಸ ಸುಂಕದ, ವಿನೋದ ಹಂಸನೂರ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

### ಯಳವತ್ತಿ, ಗೊಜನೂರ ಗ್ರಾ.ಪಂನ ವಿವಿಧ ಅಭಿವೃದ್ಧಿ ಕಾಮಗಾರಿಗಳ ವೀಕ್ಷಣೆ

# ಗ್ರಂಥಾಲಯ ವ್ಯವಸ್ಥೆಗೆ ಸಿಇಒ ಮೆಚ್ಚುಗೆ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕೆಲವೇ ತಿಂಗಳುಗಳಲ್ಲಿ ಗೊಜನೂರ ಗ್ರಾಮ ಪಂಚಾಯಿತಿ ರಾಜೀವಗಾಂಧಿ ಸೇವಾ ಕೇಂದ್ರದ ಗ್ರಾ.ಪಂ ಕಟ್ಟಡ ಮತ್ತು ಡಿಜಿಟಲ್ ಗ್ರಂಥಾಲಯ ಕಟ್ಟಡ ನಿರ್ಮಾಣ ಕಾಮಗಾರಿ ವೇಗವಾಗಿ ನಡೆಯುತ್ತಿರುವ ಬಗ್ಗೆ ಜಿಲ್ಲಾ ಪಂಚಾಯಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ ಎಸ್. ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಶನಿವಾರ ಲಕ್ಷ್ಮೇಶ್ವರ ತಾಲೂಕಿನ ಗೊಜನೂರ ಮತ್ತು ಯಳವತ್ತಿ ಗ್ರಾಮ ಪಂಚಾಯಿತಿಯಲ್ಲಿಯ ವಿವಿಧ ಯೋಜನೆಗಳ ಅಭಿವೃದ್ಧಿ ಕಾಮಗಾರಿಗಳನ್ನು ಅವರು ಪರಿಶೀಲಿಸಿದರು. ತಾಲೂಕು ಪಂಚಾಯಿತಿಯ ಅನಿರ್ಬಂಧಿತ ಅನುದಾನ 5 ಲಕ್ಷ ರೂ.ಗಳಲ್ಲಿ ಪ್ರಗತಿಯಲ್ಲಿರುವ ಡಿಜಿಟಲ್ ಗ್ರಂಥಾಲಯ ಕಟ್ಟಡ ಕಾಮಗಾರಿ ವೀಕ್ಷಿಸಿ, ಈಗಾಗಲೇ 5 ಲಕ್ಷ ರೂ.ಗಳ ಅನುದಾನದಲ್ಲಿ ನಡೆಸುತ್ತಿರುವ ಕಟ್ಟಡ ಕಾಮಗಾರಿ ಉತ್ತಮ ಹಂತದಲ್ಲಿದೆ. ಸಂಬಂಧಿಸಿದ ಗ್ರಾ.ಪಂನವರು ತಮ್ಮ ಹಂತದ ಅನುದಾನವನ್ನು ಬಳಕೆ ಮಾಡಿಕೊಂಡು ಕಟ್ಟಡ ಪೂರ್ಣಗೊಳಿಸಲು ಸೂಚಿಸಿದರು.

ಉದ್ಯೋಗ ಖಾತ್ರಿ ಮತ್ತು ಆರ್‌ಜಿಪಿಎಸ್‌ವೈ ಒಗ್ಗೂಡಿಸುವಿಕೆಯ ಒಟ್ಟು 50 ಲಕ್ಷ ರೂ.ಗಳ ಅನುದಾನದಲ್ಲಿ ಪ್ರಗತಿ ಹಂತದಲ್ಲಿರುವ ರಾಜೀವಗಾಂಧಿ ಸೇವಾ ಕೇಂದ್ರದ ಕಾಮಗಾರಿ ಬಗ್ಗೆ ಸಂತಸ ವ್ಯಕ್ತಪಡಿಸಿದರು. ಯಳವತ್ತಿ ಗ್ರಾಮ ಪಂಚಾಯಿತಿಯಿಂದ ನಡೆಯುತ್ತಿರುವ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಬೂದು ನೀರು ನಿರ್ವಹಣೆ (ಎಲ್‌ಡಬ್ಲುಎಂ) ಕಾಮಗಾರಿ ವೀಕ್ಷಿಸಿ ಅಗತ್ಯ ಸಲಹೆ ನೀಡಿದರು. ತಾಲೂಕು ಪಂಚಾಯತಿ ಅನುದಾನದಲ್ಲಿ ಗ್ರಾಮದ ಪ್ರಾಥಮಿಕ ಶಾಲೆಗೆ ವಿತರಣೆ ಮಾಡಲಾದ ಸ್ಮಾರ್ಟ್ ಕ್ಲಾಸ್ ರೂಮ್‌ನ ಸಲಕರಣೆ, ಡೆಸ್ಕ್ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸರಬರಾಜು ಮಾಡಲಾದ ಅಗತ್ಯ ವೈದ್ಯಕೀಯ ಉಪಕರಣಗಳನ್ನು ಪರಿಶೀಲಿಸಿದರು. ಆರೋಗ್ಯ ಕೇಂದ್ರದ ವಿವಿಧ ದಾಖಲೆಗಳನ್ನು ಪರಿಶೀಲಿಸಿದರು. ಗ್ರಾಮದಲ್ಲಿಯ ಜೆಜೆಎಂ ಯೋಜನೆಯ ಮೇಲ್ಮಟ್ಟದ ಜಲ ಸಂಗ್ರಹಗಾರ ಕಾಮಗಾರಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ಪಿಡಿಒ ಸವಿತಾ ಹುನಗುಂದ, ಎಇಇ ಮಾರುತಿ ರಾಠೋಡ, ಕಿರಿಯ ಅಭಿಯ್ಯು ಹಿರೇಮಠ ಇತರರಿದ್ದರು.





**ಮಕ್ಕಳ ಓದಿಗೆ ಸಂತಸ:** ಯಳವತ್ತಿ ಗ್ರಾಮದ ಸುಸಜ್ಜಿತ ಡಿಜಿಟಲ್ ಲೈಬ್ರರಿಗೆ ಭೇಟಿ ನೀಡಿದ ಜಿಪಂ ಸಿಇಒ ಭರತ್ ಎಸ್, ಗ್ರಂಥಾಲಯದಲ್ಲಿ ಮಕ್ಕಳ ಪಾಲ್ಗೊಳ್ಳುವಿಕೆಯ ಬಗ್ಗೆ ಮಾಹಿತಿ ಪಡೆದರು. ಮಕ್ಕಳಿಗೆ ರಜೆ ದಿನಗಳಲ್ಲಿ ಕೇವಲ ಟಿ.ವಿ., ಮೊಬೈಲ್ ನೋಡುವುದನ್ನು ಬಿಟ್ಟು ಗ್ರಂಥಾಲಯದಲ್ಲಿ ಪುಸ್ತಕ ಓದಲು ಹೇಳಿದರು. ಮಕ್ಕಳು ನಿರರ್ಗಳವಾಗಿ ಪುಸ್ತಕ ಓದುವುದನ್ನು ಕೆಲ ಸಮಯ ಆಲಿಸಿ, ಗ್ರಾಮದ ಮಕ್ಕಳ ಓದುವ ಆಸಕ್ತಿ ಮತ್ತು ಪೂರಕ ವಾತಾವರಣ, ವ್ಯವಸ್ಥೆಗೆ ಕಾರಣರಾದ ಗ್ರಾ.ಪಂ ಮತ್ತು ಗ್ರಂಥಾಲಯ ಮೇಲ್ವಿಚಾರಕರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

# ಸೈಕ್ಲಿಂಗ್‌ನಲ್ಲಿ ಪವಿತ್ರಾ ಕುರ್ತಕೋಟಿ ಸಾಧನೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚೆಗೆ ಹರಿಯಾಣದ ಪಂಚಕುಲದಲ್ಲಿ ನಡೆದ 20ನೇ ರಾಷ್ಟ್ರೀಯ MTB ಸೈಕ್ಲಿಂಗ್ ಚಾಂಪಿಯನಶಿಪ್‌ನಲ್ಲಿ ಗದಗ ಜಿಲ್ಲೆಯ ಸೈಕ್ಲಿಂಗ್ ಪಟು ಪವಿತ್ರಾ ಕುರ್ತಕೋಟಿ 2 ಬೆಳ್ಳಿ ಪದಕ ಮತ್ತು 1 ಕಂಚಿನ ಪದಕ ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಪವಿತ್ರಾ ಕುರ್ತಕೋಟಿಯವರ ಸಾಧನೆಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೆರಿ ಮತ್ತು ಅನಂತ ದೇಸಾಯಿ ಅಭಿನಂದಿಸಿದ್ದಾರೆ.

### ಬಿಜೆಪಿ ಪಕ್ಷದ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಬೂತ್ ಅಧ್ಯಕ್ಷರ ಮನೆ ಮೇಲೆ ಧ್ವಜಾರೋಹಣ

# ನಿರ್ಣಾಯಕ ಜನಾದೇಶದೊಂದಿಗೆ ಮರಳಿ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೇಶದ ಜನರಲ್ಲಿ ಸಂಸ್ಕೃತಿ ಹಾಗೂ ಸಂಸ್ಕಾರವನ್ನು ಬೆಳೆಸುವ ದೃಷ್ಟಿಯಿಂದ ಸ್ಥಾಪಿಸಿದ ಜನಸಂಘ ನಂತರದ ದಿನಗಳಲ್ಲಿ ಭಾರತೀಯ ಜನತಾ ಪಕ್ಷವಾಗಿ ಇದೀಗ ದೊಡ್ಡ ಮಟ್ಟದಲ್ಲಿ ಬೆಳೆದಿದೆ ಎಂದರೆ ಅದಕ್ಕೆ ಶ್ಯಾಮ್ ಪ್ರಸಾದ್ ಮುಖರ್ಜಿ ಹಾಗೂ ಪಂಡಿತ್ ದೀನದಯಾಳ್ ಉಪಾಧ್ಯಾಯರ ಪರಿಶ್ರಮವೇ ಕಾರಣ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಬಿಜೆಪಿ ಪಕ್ಷದ ಸಂಸ್ಥಾಪನಾ ದಿನಾಚರಣೆ ಅಂಗವಾಗಿ ಇಡೀ ದೇಶದಲ್ಲಿ ಬೂತ್ ಅಧ್ಯಕ್ಷರ ಮನೆ ಮೇಲೆ ಪಕ್ಷದ ಧ್ವಜಾರೋಹಣ ನೆರವೇರಿಸುವ ಕಾರ್ಯಕ್ರಮ ಹಿನ್ನೆಲೆಯಲ್ಲಿ ಶನಿವಾರ ಪಟ್ಟಣದ ವಾರ್ಡ್ ನಂ-2ರ ಬೂತ್ ಅಧ್ಯಕ್ಷ ಯಶವಂತ ಭಜಂತ್ರಿ ಹಾಗೂ ಮಂಜಯ್ಯ ಕಲಕೇರಿಮಠ ಅವರ ಮನೆಯ ಮೇಲೆ ಪಕ್ಷದ ಧ್ವಜ ಹಾರಿಸಿ ಮಾತನಾಡಿದರು.

ವಿಶ್ವದ ಅತಿದೊಡ್ಡ ರಾಜಕೀಯ ಕಾರ್ಯಕರ್ತರು, ಸದಸ್ಯರನ್ನು ಹೊಂದಿರುವ ಭಾರತೀಯ ಜನತಾ ಪಕ್ಷ ಸ್ಥಾಪನೆಗೊಂಡು 44 ವರ್ಷಗಳು ಕಳೆದಿವೆ. ಲೋಕಸಭಾ ಚುನಾವಣೆಗೆ ಸಜ್ಜಾಗುತ್ತಿರುವ ಪ್ರತಿಯೊಬ್ಬ ಕಾರ್ಯಕರ್ತರು ಪಕ್ಷವು ನಿರ್ಣಾಯಕ ಜನಾದೇಶದೊಂದಿಗೆ ಮರಳಿ ಬರಬೇಕು ಎಂಬ ಸಂಕಲ್ಪವನ್ನು ತೆಗೆದುಕೊಳ್ಳಬೇಕಾಗಿದೆ. 'ಫಿರ್ ಏಕ್ ಬಾರ್ ಮೋದಿ ಸರ್ಕಾರ್' ಎಂಬ ಧ್ಯೇಯದೊಂದಿಗೆ ಕೆಲಸ ಮಾಡಬೇಕಾಗಿದೆ ಎಂದರಲ್ಲದೆ, ಪಂಡಿತ್ ದೀನ್ ದಯಾಳ್ ಉಪಾಧ್ಯಾಯ, ಶಾಮ ಪ್ರಸಾದ ಮುಖರ್ಜಿ, ಅಟಲ್ ಬಿಹಾರಿ ವಾಜಪೇಯಿ, ಲಾಲ್ ಕೃಷ್ಣ ಅಡ್ವಾಣಿ ಮಹಾನ್ ನಾಯಕರ ತ್ಯಾಗ, ಸಂಘಟನೆ ಸ್ಮರಿಸಿದರು.

ಈ ವೇಳೆ ಶಿರಹಟ್ಟಿ ಮಂಡಲದ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ನಗರ ಘಟಕ ಅಧ್ಯಕ್ಷ ನವೀನ ಬೆಳ್ಳಟ್ಟಿ, ಶಿರಹಟ್ಟಿ ಮಂಡಲ ಪ್ರಧಾನ ಕಾರ್ಯದರ್ಶಿ ಅನಿಲ ಮುಳಗುಂದ ಶಿರಹಟ್ಟಿ ಮಂಡಲ ಯುವ ಮೋರ್ಚಾ ಅಧ್ಯಕ್ಷ ಬಸವರಾಜ ಚಕ್ರಸಾಲಿ, ಗಂಗಾಧರ ಮೆಣಸಿನಕಾಯಿ, ದುಂಡೇಶ ಕೊಟಗಿ, ಶಕ್ತಿ ಕತ್ತಿ, ಸಂತೋಷ ಜಾವೂರ, ಮಂಜುನಾಥ್ ಗೊರವರ, ವಾಸು ಬೋಮಲೆ, ನಿಂಗಪ್ಪ ಬಾಡಿಗಿ, ರಾಮು ನಾಯಕ, ರವಿ ಕೋರಿ, ವಿಶಾಲ ಬಟಗುರ್ಕಿ, ರಾಘವೇಂದ್ರ, ಬಸವರಾಜ ಮಡಿವಾಳರ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಇದ್ದರು.



ಸಹಸ್ರಾರು ಮಹಾನ್ ನಾಯಕರ ತ್ಯಾಗ, ಬಲಿದಾನ, ನೋವು, ಹತಾಶೆ, ಸೋಲುಗಳು, ಟೀಕೆಗಳಿಗೆ ಎದೆಗುಂದದೆ ಸೈದ್ಧಾಂತಿಕ ಹೋರಾಟದಿಂದ ಪಕ್ಷ ಹೆಮ್ಮರವಾಗಿ ಬೆಳೆದಿದೆ. ಈ ದಿನದಂದು ಒಗ್ಗಟ್ಟಿನಿಂದ ಪಕ್ಷದ ವಿಜಯಕ್ಕೆ ಸಂಕಲ್ಪ ಮಾಡೋಣ. ಅಟಲ್ ಬಿಹಾರಿ ವಾಜಪೇಯಿ ಅವರ ಕನಸನ್ನು ಪ್ರಧಾನಿ ನರೇಂದ್ರ ಮೋದಿಯವರು ನನಸು ಮಾಡುತ್ತಿದ್ದಾರೆ. ಇಡೀ ಜಗತ್ತು ಇಂದು ವಿಶ್ವಗುರುವಾದ ಭಾರತದೆಡೆಗೆ ಹೊರಳಿ ನೋಡುವಂತೆ ಮಾಡಿದ ಕೀರ್ತಿ ಪ್ರಧಾನಿ ಮೋದಿಯವರಿಗೆ ಸಲ್ಲುತ್ತದೆ ಎಂದು ಡಾ. ಚಂದ್ರು ಲಮಾಣಿ ಹೇಳಿದರು.

# ಉದ್ಯೋಗ ವಿನಿಮಯ ಕಚೇರಿ 95 ಅಭ್ಯರ್ಥಿಗಳ ನೋಂದಣಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಮಾರ್ಚ್ ತಿಂಗಳಲಿ 19 ಮಹಿಳಾ ಅಭ್ಯರ್ಥಿಗಳು ಸೇರಿದಂತೆ 95 ಅಭ್ಯರ್ಥಿಗಳು ಉದ್ಯೋಗ ನೆರವಿಗಾಗಿ ತಮ್ಮ ಹೆಸರು ನೋಂದಾಯಿಸಿಕೊಂಡಿದ್ದಾರೆ.

ಕಚೇರಿಯ ಚಾಲ್ತಿ ದಾಖಲೆಯ ಪ್ರಕಾರ 4452 ಮಹಿಳಾ ಅಭ್ಯರ್ಥಿಗಳು ಸೇರಿದಂತೆ 10701 ಅಭ್ಯರ್ಥಿಗಳು ಚಾಲ್ತಿ ದಾಖಲೆಯಲ್ಲಿರುವರು. ಪ್ರಸಕ್ತ ತಿಂಗಳಲ್ಲಿ 48 ಅಭ್ಯರ್ಥಿಗಳು ಉದ್ಯೋಗ ಪಡೆದಿರುತ್ತಾರೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಪ್ರಕಟಣೆ ತಿಳಿಸಿದೆ.

# ಮರೀಚಿಕೆಯಾದ ಸ್ವಚ್ಛತೆ: ರೋಗ ಹರಡುವ ಭೀತಿ



■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಅಕ್ಕಿಗುಂದ ಗ್ರಾಮದಲ್ಲಿ ಸ್ವಚ್ಛತೆ ಮರೀಚಿಕೆಯಾಗಿದ್ದು, ಚರಂಡಿಗಳು ತ್ಯಾಜ್ಯದಿಂದ ತುಂಬಿ ಗಬ್ಬು ನಾರುತ್ತಿವೆ. ಗ್ರಾಮದ ಜನರು ಸೊಳ್ಳೆ ಕಡಿತದಿಂದ ರೋಗಭೀತಿಗೊಳಗಾಗಿದ್ದಾರೆ. ಈ ಕುರಿತು ಗ್ರಾ.ಪಂ ಅಧಿಕಾರಿ ಮತ್ತು ಗ್ರಾ.ಪಂ ಸದಸ್ಯರಿಗೆ ಗ್ರಾಮಸ್ಥರು ಹಲವು ಬಾರಿ ಗಮನಕ್ಕೆ ತಂದರೂ ಯಾವುದೇ ಪ್ರಯೋಜವಾಗಿಲ್ಲ.

ಗ್ರಾಮದ ಹಾಲಸ್ವಾಮಿ ದೇವಸ್ಥಾನದ ಹತ್ತಿರ ತ್ಯಾಜ್ಯದಿಂದ ಕೂಡಿರುವ ಚರಂಡಿ ನೀರು ಸಂಗ್ರಹವಾಗಿದೆ. ಕೊಳಚೆ ನೀರು ನಿಂತಿರುವ ಜಾಗದಲ್ಲೇ ಕೆಟ್ಟು ನಿಂತಿರುವ ಕೈ ಬೋರು, ಸಿಸ್ಟನ್ ಇರುವುದು ದಿವ್ಯ ನಿರ್ಲಕ್ಷಕ್ಕೆ ಸಾಕ್ಷಿ. ದೇವಸ್ಥಾನದಲ್ಲಿ ವಿಶ್ರಾಂತಿ ಪಡೆಯುತ್ತಿದ್ದ ಗ್ರಾಮಸ್ಥರು, ಸೂಸುವ ದುರ್ವಾಸನೆಗೆ ಇತ್ತ ಬರುವುದನ್ನೇ ಬಿಟ್ಟಿದ್ದಾರೆ. ಗ್ರಾಮದ ಅಂಬೇಡ್ಕರ ಓಣಿಯಲ್ಲಿನ ಚರಂಡಿಗಳು ಗಲೀಜು ನೀರಿನಿಂದ ತುಂಬಿಕೊಂಡು ರೋಗ ರುಜಿನಗಳಿಗೆ ಆಹ್ವಾನ ನೀಡುವಂತಾಗಿವೆ. ಸೊಳ್ಳೆಗಳ ಕಾಟ ಹೆಚ್ಚುತ್ತಿದ್ದು, ಪಾಲಕರು ಮಕ್ಕಳ ಆರೋಗ್ಯದ ಬಗ್ಗೆ ಚಿಂತಿತರಾಗಿದ್ದಾರೆ. ಅಲ್ಲದೇ, ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು, ಶುದ್ಧ ಕುಡಿಯುವ ನೀರಿನ ಘಟಕ ವರ್ಷಗಳಿಂದ ಕೆಟ್ಟು ನಿಂತಿದೆ. ಒಟ್ಟಿನಲ್ಲಿ ಬಡವರು, ಕೂಲಿಕಾರರು, ಹಿಂದುಳಿದ ವರ್ಗಗಳ ಜನರಿರುವ ಅಕ್ಕಿಗುಂದ ಗ್ರಾಮ ಅಧಿಕಾರಿಗಳ, ಜನಪ್ರತಿನಿಧಿಗಳ ನಿರ್ಲಕ್ಷಕ್ಕೊಳಗಾಗಿದೆ. ಸಂಬಂಧಪಟ್ಟ ಹಿರಿಯ ಅಧಿಕಾರಿಗಳು, ಜನಪ್ರತಿನಿಧಿಗಳು ಗ್ರಾಮದ ಜನರ ಗೋಳು ಕೇಳುವ ಮನಸ್ಸು ಮಾಡಬೇಕು ಎಂದು ಗ್ರಾಮ ಗಾಳೆಪ್ಪ ಹರಿಜನ ಮತ್ತ ಹಲವರು ಆಗ್ರಹಿಸಿದ್ದಾರೆ.

# ಭಾರತದ ಪ್ರಗತಿಗಾಗಿ ಇಸ್ರೋ ಕೊಡುಗೆ




■ **ವಿಜಯಸಾಕ್ಷಿ ಸುದ್ದಿ, ಗದಗ**

ಎಂ.ಎಸ್ಸಿ. ಜಿಯೋ ಇನ್ಫರ್ಮ್ಯಾಟಿಕ್ಸ್/ಎಂ.ಎಸ್ಸಿ. ಕಂಪ್ಯೂಟರ್ ಸೈನ್ಸ್ /ಃ.ಖಿ. ಉಖಖ/ಅಖ ವಿಭಾಗಗಳ ವತಿಯಿಂದ, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗದಲ್ಲಿ ಶುಕ್ರವಾರ ಮಧ್ಯಾಹ್ನ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಸಾಮಾಜಿಕ ಅಭಿವೃದ್ಧಿ ಮತ್ತು ರಾಷ್ಟ್ರೀಯ ಪ್ರಗತಿಯಯಲ್ಲಿ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಖಖಖಔ) ಯ ಪಾತ್ರವನ್ನು ಮನದಟ್ಟು ಮಾಡಿಕೊಡುವ ದೃಷ್ಟಿಯಿಂದ 'ಇಸ್ರೋ ಯೋಜನೆಗಳು ಮತ್ತು ಸಾಮಾಜಿಕ ಪ್ರಯೋಜನಗಳು' ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸವನ್ನು ಆಯೋಜಿಸಲಾಗಿತ್ತು.

ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡಿದ್ದ ಆರ್.ವಿ. ನಾಡಗೌಡ, ಹೆಮ್ಮೆಯ ಇಸ್ರೋದ ಸ್ಫೂರ್ತಿದಾಯಕ ಸನ್ನಿವೇಶಗಳು, ಕುತೂಹಲಕಾರಿ ಕಾರ್ಯವೈಖರಿಯನ್ನು ತಿಳಿಸುತ್ತಾ, ಇಸ್ರೋ ಮಿಷನ್‌ಗಳು ಮತ್ತು ಸಾಮಾಜಿಕ ಪ್ರಯೋಜನಗಳು, ಇಸ್ರೋದ ವಿಕಾಸ, ಭಾರತೀಯ ಬಾಹ್ಯಾಕಾಶ ಕಾರ್ಯಕ್ರಮದಲ್ಲಿ ಅದರ ಪ್ರಮುಖ ಪಾತ್ರ ಮತ್ತು ರಾಷ್ಟ್ರೀಯ ಅಭಿವೃದ್ಧಿ ಹಾಗೂ ಜನರ ಜೀವನಮಟ್ಟದ ಅಭಿವೃದ್ಧಿಗಾಗಿ ಭಾರತೀಯ ರಿಮೋಟ್ ಸೆನ್ಸಿಂಗ್ ಅಪ್ಲಿಕೇಶನ್‌ಗಳ ಬಳಕೆ ಕುರಿತು ಸಮಗ್ರವಾದ ಉಪನ್ಯಾಸವನ್ನು ನೀಡಿದರು.

ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಡಾ. ಸುರೇಶ ವಿ.ನಾಡಗೌಡರ ಇಸ್ರೋದ ಸಾಧನೆಗಳು ಮತ್ತು ರಾಷ್ಟ್ರೀಯ ಅಭಿವೃದ್ಧಿ ಕಾರ್ಯಕ್ರಮಗಳಿಗೆ ನೀಡಿದ ಕೊಡುಗೆಗಳ ಕುರಿತು ಚರ್ಚೆಗೆ ಪೂರಕವಾಗಿ ಮಾತನಾಡಿ, ವಿವಿಧ ಕ್ಷೇತ್ರಗಳಲ್ಲಿ ಇಸ್ರೋದ ಬಹುಮುಖಿ ಕೊಡುಗೆಗಳ ಸಮಗ್ರ ತಿಳುವಳಿಕೆಯನ್ನು ಒದಗಿಸಿದರು. ಅಧ್ಯಕ್ಷೀಯ ನುಡಿಗಳನ್ನಾಡಿದ ಉಪಕುಲಪತಿ ಪ್ರೊ. ವಿಷ್ಣುಕಾಂತ್ ಎಸ್.ಚಟಪಲ್ಲಿ ಭಾರತದ ಪ್ರಗತಿಗಾಗಿ ಇಸ್ರೋ ಕೈಗೊಂಡಿರುವ ಹಲವಾರು ಪ್ರಯತ್ನಗಳು ಮತ್ತು ಅಭಿವೃದ್ಧಿ ಉಪಕ್ರಮಗಳನ್ನು ತಿಳಿಸಿದರು. ರಾಷ್ಟ್ರೀಯ ಪ್ರಗತಿಗಾಗಿ ಇಸ್ರೋ ಜೊತೆಗಿನ ಸಹಯೋಗದ ಮತ್ತಷ್ಟು ಮಾರ್ಗಗಳನ್ನು ಅನ್ವೇಷಿಸಲು ಅವರನ್ನು ಕರೆ ನೀಡಿದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಅಧ್ಯಾಪಕರು ಮತ್ತು ಆಡಳಿತ ಸಿಬ್ಬಂದಿ ಭಾಗವಹಿಸಿದ್ದರು.

# ಕಾಂಗ್ರೆಸ್ ಸಾಮಾಜಿಕ ಜಾಲತಾಣ ಸಮಿತಿ ಜಿಲ್ಲಾಧ್ಯಕ್ಷರಾಗಿ ರಮೇಶ ಹೊನ್ನಿನಾಯ್ಕರ ಆಯ್ಕೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಡಿ.ಕೆ.ಶಿವಕುಮಾರ ಅವರು ಗದಗ ಜಿಲ್ಲಾ ಕಾಂಗ್ರೆಸ್ ಸಾಮಾಜಿಕ ಜಾಲತಾಣ ಸಮಿತಿಗೆ ಜಿಲ್ಲಾಧ್ಯಕ್ಷರನ್ನಾಗಿ ರಮೇಶ ಹೊನ್ನಿನಾಯ್ಕರ, ಉಪಾಧ್ಯಕ್ಷರನ್ನಾಗಿ ಶಿವರಾಜ ಕೋಟಿ, ನಾಸೀರ ಅನ್ಸಾರಿ, ಜನರಲ್ ಸೆಕ್ರೆಟರಿಗಳಾಗಿ ಪವನ ಈಳಗೇರ-ರೋಣ, ಪ್ರವೀಣ ಸಂಗಳದಶೆಟ್ಟರ-ಗದಗ, ಶರಣಪ್ಪ ಶಿರುಂದ-ನರಗುಂದ ಹಾಗೂ ಮಹಾಂತೇಶ ಮುಗಳಿ-ಶಿರಹಟ್ಟಿ ಅವರನ್ನು ನೇಮಕ ಮಾಡಿದ್ದಾರೆ.

# ಉಚಿತ ಸಂಸ್ಕೃತಿ-ಸಂಸ್ಕಾರ ಶಿಬಿರ

■ **ವಿಜಯಸಾಕ್ಷಿ ಸುದ್ದಿ, ಗದಗ**

ಎಸ್‌ವಾಂಬ್‌ಬಿಎಂಎಸ್ ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಮತ್ತು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ-2024 ಗದಗ ಇವರುಗಳ ಸಹಯೋಗದಲ್ಲಿ ಬೇಸಿಗೆ ರಜೆಯ ಪ್ರಯುಕ್ತ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗಾಗಿ ಸಂಸ್ಕೃತಿ-ಸಂಸ್ಕಾರ ಶಿಬಿರ ಆಯೋಜಿಸಲಾಗಿದೆ.

ಶಿಬಿರವು ಏಪ್ರಿಲ್ 12ರಿಂದ ಏ.21ರವರೆಗೆ 10 ದಿನಗಳ ಪರ್ಯಂತ ಸಿದ್ಧಲಿಂಗ ನಗರದಲ್ಲಿನ ಬಸವೇಶ್ವರ ಹೈಸ್ಕೂಲ್ (ಬಸವ ಪ್ರಭೆ ಕ್ಯಾಂಪಸ್) ಆವರಣದಲ್ಲಿ ಪ್ರತಿದಿನ ಬೆಳಿಗ್ಗೆ 6.30ರಿಂದ 9.30ರವರೆಗೆ ನಡೆಯಲಿದೆ. 5ನೇ ತರಗತಿಯಿಂದ 10ನೇ ತರಗತಿ ಓದುತ್ತಿರುವ ಶಾಲಾ ಮಕ್ಕಳಿಗೆ ಶಿಬಿರದಲ್ಲಿ ಪಾಲ್ಗೊಳ್ಳಲು ಅವಕಾಶವಿದೆ.

ಶಿಬಿರದಲ್ಲಿ ನಿತ್ಯ ಯೋಗಾಭ್ಯಾಸ ಕ್ರಮ, ಭಾರತೀಯ ಕ್ರೀಡೆಗಳು (ಮಲ್ಲಕಂಬ, ಕಬಡ್ಡಿ, ಖೋ-ಖೋ ಇನ್ನಿತರೆ ಮನೋಲ್ಲಾಸ ಆಟಗಳು) ಸಂಗೀತ, ನೃತ್ಯ, ವ್ಯಕ್ತಿತ್ವ ವಿಕಸನ ಚಟುವಟಿಕೆಗಳ ತರಬೇತಿ ನೀಡಲಾಗುವುದು. ಪ್ರವೇಶ ಬಯಸಿದ ಅಭ್ಯರ್ಥಿಗಳು ನೇರವಾಗಿ ಶಿಬಿರ ಪ್ರಾರಂಭೋತ್ಸವ ದಿನವಾದ ಏ.12ರ ಬೆಳಿಗ್ಗೆ 6.30 ಗಂಟೆಗೆ ಶಿಬಿರ ನಡೆಯುವ ಸ್ಥಳದಲ್ಲಿ ಉಪಸ್ಥಿತರಿರಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕ: ಸಂಯೋಜಕರು, ಸಂಸ್ಕೃತಿ-ಸಂಸ್ಕಾರ ಶಿಬಿರ-2024 ದೂರವಾಣಿ ಸಂಖ್ಯೆ 9448317188. ಹೆಚ್ಚಿನ ಸಂಖ್ಯೆಯಲ್ಲಿ ಶಾಲಾ ಮಕ್ಕಳು ಶಿಬಿರದಲ್ಲಿ ಪಾಲ್ಗೊಂಡು ಶಿಬಿರದ ಪ್ರಯೋಜನ ಪಡೆಯಬೇಕೆಂದು ಸಂಘಟಿಕರ ಪರವಾಗಿ ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ವಿನಂತಿಸಿದ್ದಾರೆ.

# ಡಾ. ಬಾಬು ಜಗಜೀವನ ರಾಮ್ ಜನ್ಮ ದಿನಾಚರಣೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ವತಿಯಿಂದ ಹಸಿರು ಕ್ರಾಂತಿಯ ಹರಿಕಾರ ದಿ. ಬಾಬು ಜಗಜೀವನ ರಾಮ್ ಅವರ 117ನೇ ಜನ್ಮ ದಿನವನ್ನು ಗದಗ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಕಾರ್ಯಾಲಯದಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ, ಬಸವರಾಜ ಕಡೇಮನಿ, ಗದಗ ಜಿಲ್ಲಾ ಎಸ್.ಸಿ. ಘಟಕದ ಅಧ್ಯಕ್ಷರು, ಶಹರ ಘಟಕದ ಅಧ್ಯಕ್ಷ ಶಂಭು ಕಾಳೆ, ಎಸ್.ಎನ್. ಬಳ್ಳಾರಿ, ಸೈಯದ್ ಕೊಪ್ಪಳ, ಚನ್ನವೀರ ಮಳಗಿ, ರಮೇಶ ಹೊನ್ನೆನಾಯ್ಕರ, ಶಿವು ಬಳ್ಳಾರಿ, ವಾಸು ಹುಣಸೀಮರದ, ಯುವರಾಜ ಬಳ್ಳಾರಿ, ಗುರು ಭಜಂತ್ರಿ, ಮಂಜು ಕೊರವರ, ಕೆಂಚಪ್ಪ ಮ್ಯಾಗೇರಿ, ಮಲ್ಲಿಕ ಸಂಗಾಪೂರ, ಕೃಷ್ಣಾ ಪೂಜಾರ, ಚಂದ್ರು, ಶಾರುಕ ಹುಯಿಲಗೋಳ, ಸಂತೋಷ ಬನಿಕರ, ರಮೇಶ ಚಲವಾದಿ, ಮಂಜುನಾಥ ವಿಭೂತಿ, ಶಿವಾನಂದ ಮಲ್ಲಸಮುದ್ರ ಮುಂತಾದವರು ಉಪಸ್ಥಿತರಿದ್ದರು.

# ಆಸ್ತಿ ಮಾಲೀಕರ ಗಮನಕ್ಕೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ನರಗುಂದ ಪುರಸಭೆ ವ್ಯಾಪ್ತಿಯ ಆಸ್ತಿಗಳ ಮಾಲೀಕರಿಗೆ, ಅನುಭೋಗದಾರರಿಗೆ ತಿಳಿಸುವುದೇನೆಂದರೆ, ಪೌರಾಡಳಿತ ನಿರ್ದೇಶನಾಲಯ ಮತ್ತು ನೊಂದಣಿ ಮತ್ತು ಮುದ್ರಾಂಕ ಇಲಾಖೆ ಪ್ರಕಟಿಸಿದ ಮಾರುಕಟ್ಟೆ ಮಾರ್ಗಸೂಚಿ ಬೆಲೆಗಳು ಬದಲಾವಣೆಯಾಗಿವೆ. ಈ ಬೆಲೆಗಳನ್ನು 2024-25ನೇ ಸಾಲಿಗೆ ತೆರಿಗೆ ತಂತ್ರಾಂಶದಲ್ಲಿ ಅಳವಡಿಸಿಕೊಂಡು ವಸತಿ, ವಾಣಿಜ್ಯ, ಕೈಗಾರಿಕೆ ಮತ್ತು ಖಾಲಿ ನಿವೇಶನಗಳಿಗೆ ಆಸ್ತಿ ತೆರಿಗೆ ಹೆಚ್ಚಿಸಲು ಸಾಮಾನ್ಯ ಸಭೆಯ ಠರಾವಿನಲ್ಲಿ ಸೂಚಿಸಿ ಪರಿಷ್ಕರಣೆ ಮಾಡಿದೆ.

ಏಪ್ರಿಲ್ 1ರಿಂದ 31ರವರೆಗೆ ಶೇ.5 ರಿಯಾಯತಿ, ಮೇ 1ರಿಂದ ಜೂನ್ 30ರವರೆಗೆ ದಂಡ ರಹಿತ ಪಾವತಿ, ಜುಲೈ 1ರಿಂದ ಆಸ್ತಿ ತೆರಿಗೆ ಮೇಲೆ ಪ್ರತಿ ತಿಂಗಳು ಶೇ.2ರಷ್ಟು ದಂಡ ವಿಧಿಸಲಾಗುವುದು.

ಸಾರ್ವಜನಿಕರು ಸಕಾಲದಲ್ಲಿ ಆಸ್ತಿ ತೆರಿಗೆ ಪಾವತಿಸಿ ನರಗುಂದ ಪಟ್ಟಣದ ಅಭಿವೃದ್ಧಿಗೆ ಸಹಕರಿಸಬೇಕೆಂದು ನರಗುಂದ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka